# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –233 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:08–04–2025 ಮಂಗಳವಾರ | ಪುಟ: 4 | ಬೆಲೆ : ರೂ.2–00

Volume - 02 Issue - 233 | RNI No: KARKAN/2023/88462 | KA/SK/CTA-874/2024-2026 | Chitradurga | Date: 08-04-2025 Tuesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ರಾಮನ ಧ್ಯೆಯಿಂದ ಎಲ್ಲರ ಸಮಸ್ಯೆಗಳಿಗೆ ಪರಿಹಾರ ಸಾಧ್ಯ: ರಘುಮೂರ್ತಿ 2

ಕನಗೊಂಡನಹಳ್ಳಿಗೆ 24/7 ನೀರು ಪೂರೈಕೆ: ಪ್ರಭಾ ಮಲ್ಲಿಕಾರ್ಜುನ್ 3

ಕೆರೆ ಮಣ್ಣು ಜಮೀನಿಗೆ, ಜಾಗ ಗುರುತಿಸಿ; ಒತ್ತುವರಿ ಕೆರೆ ತೆರವಿಗೆ ಕ್ರಮಕ್ಕೆ ಸೂಚನೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಕೌಶಲ್ಯ ತರಬೇತಿ

» ಚಿತ್ರದುರ್ಗ

ಚಿತ್ರದುರ್ಗ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿ.ಟಿ.ಟಿ.ಸಿ) ವತಿಯಿಂದ ಯುವನಿಧಿ ಯೋಜನೆಯಡಿ ನೋಂದಾಯಿತರಾಗಿರುವ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಎಂಜಿನಿಯರಿಂಗ್, ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್, ಮೆಕ್ಯಾನಿಕಲ್ ಎಂಜಿನಿಯರಿಂಗ್ ಕ್ಷೇತ್ರದಲ್ಲಿ ಡಿಪ್ಲೋಮಾ/ಬಿ.ಇ/ಬಿ.ಟೆಕ್/ಎಂ.ಇ/ಎಂ.ಟೆಕ್ ಕೋರ್ಸ್ ಪೂರ್ಣಗೊಳಿಸಿದ ಅಭ್ಯರ್ಥಿಗಳು ಉದ್ಯೋಗಗಳ ಅನ್ವೇಷಣೆಗೆ ಸಹಾಯ ಮಾಡಲು ಸಂಬಂಧಿಸಿತಕ್ಷೇತ್ರಗಳಲ್ಲಿಕೌಶಲ್ಯಗಳನ್ನುಹೆಚ್ಚಿಸಲು ತರಬೇತಿ ನೀಡಲಾಗುವುದು. ಕೌಶಲ್ಯವರ್ಧನೆ ಕೋರ್ಸ್‌ನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಕೆಲಸ ದೊರಕಿಸಲು ಜಿಟಿಟಿಸಿ ವತಿಯಿಂದ ನಿಗದಿತ ಸಂದರ್ಶನಗಳನ್ನು ನೆಡಸಲಾಗುತ್ತದೆ. ತರಬೇತಿಯ ಸಮಯದಲ್ಲಿ ಸರ್ಕಾರವು ಪಾವತಿಸುವ ಯುವನಿಧಿ ಸ್ಟೈಫಂಡ್ ಅವರ ವೇಳಾ ಪಟ್ಟಿಯ ಪ್ರಕಾರ ಮುಂದುವರಿಯುತ್ತಿದೆ. ಆಸಕ್ತರು ಚಿತ್ರದುರ್ಗ ನಗರದ ಹಳೆಯ ಪಿ.ಬಿ. ರಸ್ತೆ ಕಣಿವೆ ಮಾರಮ್ಮ ದೇವಸ್ಥಾನದ ಎದುರು, ಕುಂಚಿಗನಾಳ್‌ನಲ್ಲಿರುವ ಜಿ.ಟಿ.ಟಿ.ಸಿ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9738465834, 86602703535 ಕರೆ ಮಾಡಬಹುದು ಎಂದು ಜಿ.ಟಿ.ಟಿ.ಸಿ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನಾಮನಿರ್ದೇಶನ । ಸಲ್ಲಿಸಲು ಸೂಚನೆ

» ಚಿತ್ರದುರ್ಗ

2024 ಹಾಗೂ 2025ನೇ ಸಾಲಿನಲ್ಲಿ ರಾಜ್ಯ ಸರ್ಕಾರಿ ಅಧಿಕಾರಿ, ನೌಕರರಿಗೆ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ನೀಡಲು ತೀರ್ಮಾನಿಸಿದ್ದು, ಈ ಸಂಬಂಧ ನಾಮ ನಿರ್ದೇಶನಗಳನ್ನು ಸಲ್ಲಿಸಲು ಏಪ್ರಿಲ್ 14 ರವರೆಗೆ ಅವಕಾಶ ಕಲ್ಪಿಸಲಾಗಿದೆ. ಜಿಲ್ಲಾ, ರಾಜ್ಯ ಮಟ್ಟದ ಪ್ರಶಸ್ತಿ ಆಯ್ಕೆಗೆ ನಾಮ ನಿರ್ದೇಶನಗಳನ್ನು ಏ. 14 ರೊಳಗಾಗಿ ಆನ್‌ಲೈನ್ ಜಾಲತಾಣ https://dparar.karnataka.gov.in/ ಅಥವಾ https://sarvothamaawards.karnataka.gov.in ಮೂಲಕ ಮಾತ್ರವೇ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

### ಏಪ್ರಿಲ್ 22 ರಿಂದ ಉಪಲೋಕಾಯುಕ್ತರ ಭೇಟಿ, ಸಾರ್ವಜನಿಕ ಅಹವಾಲು ಸ್ವೀಕಾರ, ಅರ್ಜಿಗಳ ವಿಚಾರಣೆ

» ದಾವಣಗೆರೆ

ಉಪಲೋಕಾಯುಕ್ತರಾದ ಬಿ.ವೀರಪ್ಪ ಅವರು ಇದೇ ಏಪ್ರಿಲ್ 22 ರಿಂದ 26 ರ ವರೆಗೆ ದಾವಣಗೆರೆಯಲ್ಲಿ ಪ್ರವಾಸ ಕೈಗೊಂಡು ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ ವಿಚಾರಣೆ ನಡೆಸುವರು ಎಂದು ಲೋಕಾಯುಕ್ತ ಎಸ್ಪಿ ಎಂ.ಎಸ್.ಕೌಲಾಪೂರೆ ಹೇಳಿದರು. ಶುಕ್ರವಾರ ಅವರ ಕಚೇರಿಯಲ್ಲಿ ಉಪ ಲೋಕಾಯಕ್ತರ ಭೇಟಿ ಕುರಿತ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.ಉಪಲೋಕಾಯುಕ್ತರು ಏಪ್ರಿಲ್ 22 ರಂದು ದಾವಣಗೆರೆಗೆ ಆಗಮಿಸಿ ಏ.23 ರಂದು ವಿವಿಧ ಸ್ಥಳಗಳಿಗೆ ಭೇಟಿ ನೀಡುವರು. ಏ.24 ರಂದು ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಬೆಳಿಗ್ಗೆ 10 ಗಂಟೆಯಿಂದ ಮ.1.30 ಹಾಗೂ ಮ.2.30 ರಿಂದ ಸಂಜೆ 5 ಗಂಟೆಯವರೆಗೆ ಸಾರ್ವಜನಿಕರಿಂದ ಸ್ವೀಕರಿಸಿದ ಅಹವಾಲುಗಳ ವಿಚಾರಣೆ ನಡೆಸುವರು.ಏ.25 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಬಾಕಿ ಇರುವ ಲೋಕಾಯುಕ್ತ ಪ್ರಕರಣಗಳ ವಿಚಾರಣೆ ನಡೆಸುವರು. ಉಪ ಲೋಕಾಯುಕ್ತರ ಪ್ರವಾಸ ಕುರಿತು ಸಾರ್ವಜನಿಕರಿಗೆ ಸಾಕಷ್ಟು ಮಾಹಿತಿ ಕೊರತೆ ಇದೆ. ಸಾರ್ವಜನಿಕರಿಗೆ ಅರಿವು ಮೂಡಿಸಲು ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮ ಪಂಚಾಯತ್ ಮಟ್ಟದಲ್ಲಿ ಕರಪತ್ರ, ಆಹ್ವಾನ ಪತ್ರಿಕೆ, ಸಾರ್ವಜನಿಕ ಸ್ಥಳಗಳಲ್ಲಿ ಭಿತ್ತಿ ಪತ್ರಗಳನ್ನು ಅಂಟಿಸುವ ಮೂಲಕ ಮತ್ತು ಕರ ಪತ್ರಗಳನ್ನು ಸಾರ್ವಜನಿಕ ಕಚೇರಿ, ಆಸ್ಪತ್ರೆ, ಇನ್ನಿತರೆ ಕಚೇರಿಗಳಲ್ಲಿ ಪ್ರದರ್ಶಿಸಬೇಕು. ಅಲ್ಲದೇ ನಗರಸಭೆ ಮತ್ತು ಗ್ರಾಪಂಗಳಲ್ಲಿನ ಸ್ವಚ್ಛವಾಹಿನಿಗಳಲ್ಲಿ ಹಾಗೂ ಡಿಜಿಟಲ್ ಬೋರ್ಡ್‌ಗಳಲ್ಲಿಯೂ ಉಪ ಲೋಕಾಯುಕ್ತರ ಭೇಟಿ ಕುರಿತು ಪ್ರಚಾರ ಮಾಡಬೇಕು.

# ಹೊಸದುರ್ಗದಲ್ಲಿ ಸೊರಗುತ್ತಿರುವ ಬಿಜೆಪಿ

## ಕಗ್ಗಂಟಾಗಿಯೇ ಉಳಿದ ಅಧ್ಯಕ್ಷ ಸ್ಥಾನದ ಆಯ್ಕೆ; ನಾಯಕತ್ವದ ಗೊಂದಲದಲ್ಲಿ ಕಾರ್ಯಕರ್ತರು

» ಪಿ.ಟಿ.ಸಿದ್ದೇಶ್ ಲಕ್ಕಿಹಳ್ಳಿ

ಹೊಸದುರ್ಗ: ಕಳೆದ 2023ರ ವಿಧಾನಸಭಾ ಕ್ಷೇತ್ರದ ಚುನಾವಣೆಯಲ್ಲಿ ಹೊಸದುರ್ಗ ಕಾಂಗ್ರೆಸ್ ತೆಕ್ಕೆಗೆ ಜಾರಿದ ಬಳಿಕ, ಎದುರಾಳಿಯಾಗಿ ಪೈಪೋಟಿ ನೀಡಿದ್ದ ಬಿಜೆಪಿ ಪಕ್ಷ ಸೋಲಿನಿಂದ ಮೇಲೆಳದೆ, ಚುನಾವಣೆ ಮುಗಿದು 2 ವರ್ಷ ಕಳೆಯುತ್ತಾ ಬಂದರೂ, ನಾಯಕತ್ವದ ಗೊಂದಲದಲ್ಲಿ ಸೊರಗುತ್ತಿದೆ.ಇದರಿಂದಾಗಿಪಕ್ಷದಸಿದ್ದಾಂತ ನಂಬಿಕೊಂಡು ಬದ್ಧತೆಯಿಂದಿರುವ ಪಕ್ಷದ ಶಿಸ್ತುಬದ್ಧ, ನಿಷ್ಠಾವಂತ ಕಾರ್ಯಕರ್ತರು ಕಂಗಲಾಗುವಂತಹ ಸ್ಥಿತಿ ಬಂದೊದಗಿದೆ.

2018ರ ವಿಧಾನಸಭಾ ಕ್ಷೇತ್ರದ ಚುನಾವಣೆಯಲ್ಲಿ ಹೇಗಾದರೂ ಮಾಡಿ, ಶತಾಯ–ಗತಾಯ ಬಿಜೆಪಿ ಪಕ್ಷದ ಅಭ್ಯರ್ಥಿಯನ್ನು ಗೆಲ್ಲಿಸಿಕೊಳ್ಳಲೇ ಬೇಕೆಂಬ ಹಠಕ್ಕೆ ಬಿದ್ದು, 2013ರ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಮತ್ತು ಪಕ್ಷೇತರ ಅಭ್ಯರ್ಥಿಗಳಾಗಿಸ್ಪರ್ಧಿಸಿದ್ದಬದ್ಧವೈರಿಗಳೆಲ್ಲಾ ಒಂದುಗೂಡಿ, ಒಮ್ಮತದ ನಿರ್ಧಾರಕ್ಕೆ ಬಂದು ಒಬ್ಬರು ಅಭ್ಯರ್ಥಿಯಾಗಿ, ಇನ್ನುಳಿದವರು ಕಾರ್ಯಕರ್ತರಂತೆ ಕೆಲಸ ಮಾಡಿ, ಚುನಾವಣಾ ಅಖಾಡದಲ್ಲಿ ಎದುರಾಳಿಯಾಗಿದ್ದ ಕಾಂಗ್ರೆಸ್ ಅಭ್ಯರ್ಥಿಗೆ ಅತ್ಯಧಿಕ ಮತಗಳ ಅಂತರದಲ್ಲಿ ಸೋಲುಣಿಸಿದ್ದರು. ಇಂದಿನ ಪರಿಸ್ಥಿತಿ ನೋಡಿದರೆ, ಆ ದಿನಗಳು ಮತ್ತೆ ಹೊಸದುರ್ಗ ಬಿಜೆಪಿ ಪಾಲಿಗೆ ಬರುವುದಿಲ್ಲವೇನೋ ಎಂದೆನಿಸುತ್ತಿದೆ!




> ಹೊಸದುರ್ಗದಲ್ಲಿ ಬಿಜೆಪಿ ಪಕ್ಷ ಸಮರ್ಥವಾಗಿ ವಿರೋಧಪಕ್ಷವಾಗಿ ಕೆಲಸ ಮಾಡುವಲ್ಲಿ ವಿಫಲವಾಗಿರುವುದರಿಂದ, ಆಡಳಿತ ಪಕ್ಷದ ಶಾಸಕರು ಸರ್ವಾಧಿಕಾರಿಯಂತೆ ವರ್ತಿಸುತ್ತಿದ್ದಾರೆ. ಶಾಸಕರಿಗೆ ಕೌಂಟರ್ ಕೊಡುವವರೇ ವಿರೋಧ ಪಕ್ಷದಲ್ಲಿ ಇಲ್ಲದಂತಾಗಿದೆ. ಪಕ್ಷದ ಹಿರಿಯರೆಲ್ಲಾ ಬಹಳಷ್ಟು ಕಷ್ಟಪಟ್ಟು ಪಕ್ಷ ಕಟ್ಟಿದ್ದೇವೆ. ಆದರೆ, ಇತ್ತೀಚೆಗೆ ಪಕ್ಷದಲ್ಲಿ ಹಿರಿಯರ ಮಾತಿಗೆ ಬೆಲೆಯೇ ಇಲ್ಲದಂತಾಗುತ್ತಿದ್ದು, ಬೇಸರ ತರಿಸಿದೆ. ನಮ್ಮಲ್ಲಿ ಪಕ್ಷಕ್ಕಾಗಿ ಏನು ಕೆಲಸ ಮಾಡದೆ, ಅಧಿಕಾರಕ್ಕಾಗಿ ಅಪಹಾಪಿಸುವವರಿಂದ ಪಕ್ಷಕ್ಕೆ ಹಿನ್ನಡೆಯಾಗುತ್ತಿದೆ. ಹೈಕಮಾಂಡ್ ಇತ್ತ ಗಮನಹರಿಸಿ, ಸಮರ್ಥರನ್ನು ಅಧ್ಯಕ್ಷರನ್ನಾಗಿ ಆಯ್ಕೆಮಾಡಬೇಕು. ನಿರ್ಲಕ್ಷ್ಯ ಹೀಗೆಯೇ ಮುಂದುವರೆದರೆ, ಪಕ್ಷ ಸಂಕಟದ ಸ್ಥಿತಿಗೆ ತಲುಪುವುದರಲ್ಲಿ 2 ಮಾತಿಲ್ಲ.
>
> » **ದೊಡ್ಡಘಟ್ಟ ಲಕ್ಷ್ಮಣ್ ಮಾಜಿ ಅಧ್ಯಕ್ಷರು. ಬಿಜೆಪಿ ಮಂಡಲ, ಹೊಸದುರ್ಗ**

> ಕಳೆದ 2 ವರ್ಷಗಳಿಂದ ಪಕ್ಷ ಸಂಘಟನೆಯ ಕಾರ್ಯ ಸಂಪೂರ್ಣವಾಗಿ ನಿಷ್ಕ್ರಿಯವಾಗಿದ್ದು, ಎರಡು ವರ್ಷದಲ್ಲಿ ಕಾರ್ಯಕರ್ತರನ್ನು ಒಂದುಗೂಡಿಸಿ, ಒಂದು ಸಭೆ ಮತ್ತು ಸಮಾರಂಭವನ್ನು ಮಾಡಿಲ್ಲ. ಹೀಗಾದರೆ, ಪಕ್ಷವನ್ನು ಕಟ್ಟಲು ಮತ್ತು ಚುನಾವಣೆಗಳನ್ನು ಗೆಲ್ಲಲು ಹೇಗೆ ಸಾಧ್ಯ? ಪಕ್ಷದ ಕಾರ್ಯಕರ್ತರ ಮನೆಗಳಿಗೆ ಅಥವಾ ಗ್ರಾಮಗಳಿಗೆ ಭೇಟಿ ನೀಡಿ ಸಮಸ್ಯೆಗಳನ್ನ ಕೇಳಬೇಕು, ಅವರ ಕಷ್ಟ-ಸುಖಗಳಿಗೆ ಸ್ಪಂದಿಸುವ ವ್ಯಕ್ತಿ ನಿಜವಾಗಿಯೂ ಲೀಡರ್ ಆಗುತ್ತಾನೆ. ಚುನಾವಣೆಯ ಸಂದರ್ಭದಲ್ಲಿ ಬರುವವರು ಲೀಡರ್ ಆಗುವುದಿಲ್ಲ. 2023 ರ ಚುನಾವಣೆಯಲ್ಲಿ ನಮ್ಮ ನಾಯಕರ ನಡುವಿನ ಗೊಂದಲದಿಂದ ನಮಗೆ ಸೋಲಾಯಿತು. ರಾಜ್ಯ ಮತ್ತು ರಾಷ್ಟ್ರೀಯ ನಾಯಕರು ಎಲ್ಲವನ್ನು ಗಮನಿಸುತ್ತಾರೆ. ಸರ್ವೆಯಲ್ಲಿ ಯಾರು ಉತ್ತಮ ಎಂದು ಕಾಣಿಸುತ್ತಾರೋ, ಅವರಿಗೆ ಟಿಕೆಟ್ ನೀಡುತ್ತಾರೆ. ಟಿಕೆಟ್ ಆಕಾಂಕ್ಷಿಗಳು ಕಾರ್ಯಕರ್ತರಲ್ಲಿ ಗೊಂದಲ ಉಂಟು ಮಾಡುವುದನ್ನು ಬಿಟ್ಟು, ಮೊದಲು ಪಕ್ಷ ಸಂಘಟನೆ ಮಾಡುವ ಕಾರ್ಯಕ್ಕೆ ಒತ್ತು ನೀಡಬೇಕು.
>
> » **ಪಿ.ಪರಮೇಶ್ವರಪ್ಪ ಕಂಚಿಪುರ ಅಧ್ಯಕ್ಷರು, ಮಹಾಶಕ್ತಿ ಕೇಂದ್ರ, ಶ್ರೀರಾಂಪುರ ಹೋಬಳಿ.**

2018ರ ಚುನಾವಣೆ ಬಿಜೆಪಿ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರ ಹುಮ್ಮಸ್ಸು ಹಾಗೂ ಸಂಘಟನೆಯ ಶಕ್ತಿಯನ್ನು ದುಪ್ಪಟ್ಟುಗೊಳಿಸಿತ್ತು. ದಿನ ಕಳೆದಂತೆ ಪಕ್ಷದ ಮುಖಂಡರ ನಡುವಿನ ಭಿನ್ನಾಭಿಪ್ರಾಯ, ರಾಜಕೀಯ ವೈರತ್ವ ತಾರಕಕ್ಕೇರಿ 2023ರ ವಿಧಾನಸಭಾ ಕ್ಷೇತ್ರದ ಚುನಾವಣೆ ಸಮೀಪಿಸುತ್ತಿದ್ದಂತೆಯೇ ಬಹಿರಂಗವಾಗಿ ಸ್ಫೋಟಗೊಂಡಿತು. 2018 ರ ಚುನಾವಣೆಯಲ್ಲಿ ಒಂದುಗೂಡಿದ್ದ ಶಕ್ತಿಯೆಲ್ಲಾ ಇಬ್ಭಾಗವಾದ ಪರಿಣಾಮ ಸಹಜವಾಗಿಯೇ, 2023ರಲ್ಲಿ ಬಿಜೆಪಿಹೀನಾಯವಾಗಿಸೋಲು ಕಾಣಬೇಕಾಯಿತು. ಸೋಲಿನ ಸುಳಿಯಲ್ಲಿ ಸಿಲುಕಿರುವ ಹೊಸದುರ್ಗ ಬಿಜೆಪಿಯನ್ನು ಮೇಲೆತ್ತುವ ಹೊಣೆಗಾರಿಕೆ ಪಕ್ಷದ ಹೈಕಮಾಂಡ್ ಮತ್ತು ರಾಜ್ಯ ನಾಯಕರ ಮೇಲಿದ್ದು, ಅವರು ಕೂಡ ಇತ್ತ ಗಮನಹರಿಸದೆ ಇರುವುದು ಕಾರ್ಯಕರ್ತರ ಬೇಸರಕ್ಕೆ ಕಾರಣವಾಗಿದೆ ಎನ್ನಲಾಗುತ್ತಿದೆ.

**ನಮ್ಮ ಜನ ವಿಶೇಷ**

ಹೊಸದುರ್ಗದಲ್ಲಿ ಜೆಡಿಎಸ್ ಪಕ್ಷಕ್ಕೆ ಸ್ವಂತದ್ದಾದ ಒಂದು ಕಚೇರಿಯಿದೆ. 18.ಕೋಟಿ ಸದಸ್ಯರನ್ನು ಹೊಂದಿ, ವಿಶ್ವದಲ್ಲಿಯೇ ಅತಿ ದೊಡ್ಡ ರಾಜಕೀಯ ಪಕ್ಷವೆಂದು ಹೆಗ್ಗಳಿಕೆ ಹೊಂದಿರುವ ಬಿಜೆಪಿ ಪಕ್ಷಕ್ಕೆ ಹೊಸದುರ್ಗ ತಾಲೂಕಿನ ಕೇಂದ್ರ ಸ್ಥಾನದಲ್ಲಿ ಒಂದು ಕಚೇರಿಯೂ ಇಲ್ಲದಂತಾಗಿರುವುದು ನಾಚಿಕೆಗೇಡಿನ ಸಂಗತಿ. 2024ರ ಲೋಕಸಭಾ ಕ್ಷೇತ್ರದ ಚುನಾವಣೆಯಲ್ಲಿ ತಾಲೂಕಿನಲ್ಲಿ ಪ್ರಚಾರ ಅಷ್ಟಾಗಿ ನಡೆಯದಿದ್ದರೂ, ನರೇಂದ್ರ ಮೋದಿಯವರ ನಾಯಕತ್ವಕ್ಕೆ ಮತದಾರರು ಲೀಡ್ ಕೊಟ್ಟಿದ್ದಾರೆಯೇ ಹೊರತು, ಸ್ಥಳೀಯ ಮುಖಂಡರ ನಾಯಕತ್ವಕ್ಕಲ್ಲ. ಪಕ್ಷದ ಕೆಲ ಮುಖಂಡರು ಇನ್ನು ಮುಂದಾದರು ಗುಂಪುಗಾರಿಕೆ, ಹೈಟೆಕ್ ರಾಜಕಾರಣಬಿಟ್ಟು,ಕಾರ್ಯಕರ್ತರೊಂದಿಗೆ ಸಂಪರ್ಕದಲ್ಲಿದ್ದು, ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಮುಂಬರುವ ಚುನಾವಣೆಗೆ ಸನ್ನದ್ಧವಾಗಬೇಕು. ಹೀಗೆಯೇ ಮುಂದುವರೆದರೆ, ಪಕ್ಷದ ಅಭ್ಯರ್ಥಿಗಳು ಯಾವುದೇ ಒಂದು ಚುನಾವಣೆಯಲ್ಲಿಯೂ ಗೆಲ್ಲಲಾಗದಂತಹ ಸ್ಥಿತಿ ನಿರ್ಮಾಣವಾಗುತ್ತದೆ ಎಂದು ಹೆಸರೇಳಲು ಇಚ್ಚಿಸದ ಬಿಜೆಪಿ ಪಕ್ಷದ ಸಕ್ರಿಯ ಕಾರ್ಯಕರ್ತನೊಬ್ಬ ಬೇಸರ ವ್ಯಕ್ತಪಡಿಸಿದ ಪರಿಯಿದು.

**ಕಗ್ಗಂಟಾಗಿಯೇ ಉಳಿದ ಅಧ್ಯಕ್ಷ ಸ್ಥಾನದ ಆಯ್ಕೆ:** ಈಗಾಗಲೇ, ಜಿಲ್ಲೆಯ 5 ತಾಲೂಕುಗಳ ಮಂಡಲಗಳಿಗೆ ಅಧ್ಯಕ್ಷರನ್ನು ಆಯ್ಕೆ ಮಾಡಲಾಗಿದ್ದು, ನಾಯಕರ ನಡುವಿನ ತಿಕ್ಕಾಟ ಮತ್ತು ಗೊಂದಲದಿಂದಾಗಿ ಹೊಸದುರ್ಗ ಬಿಜೆಪಿಗೆ ಅಧ್ಯಕ್ಷರನ್ನು ಆಯ್ಕೆ ಮಾಡುವ ವಿಚಾರ ಕಗ್ಗಂಟಾಗಿಯೇ ಉಳಿದಿದೆ. ವಿಧಾನಸಭಾ ಕ್ಷೇತ್ರದ ಚುನಾವಣೆ ಇನ್ನೂ 3 ವರ್ಷ ಇರುವಾಗಲೇ ಬಿಜೆಪಿ ಪಕ್ಷದ ಟಿಕೆಟ್ ಪಡೆಯಲು ನಾಲ್ಕೈದು ಜನ ಆಕಾಂಕ್ಷಿಗಳು ಹುಟ್ಟಿಕೊಂಡಿದ್ದು, ಆಕಾಂಕ್ಷಿಗಳು ತಮ್ಮ ಬೆಂಬಲಿಗನನ್ನು ಅಧ್ಯಕ್ಷ ಸ್ಥಾನದಲ್ಲಿ ಕೂರಿಸಿದರೆ, ನಮ್ಮ ಹಾದಿ ಸುಗಮವಾಗಿರಲಿದೆ. ಇದಕ್ಕೆ ನಮ್ಮ ಬೆಂಬಲಿಗನೇ ಅಧ್ಯಕ್ಷನಾಗಬೇಕೆಂಬ ಹಠಕ್ಕೆ ಬಿದ್ದಿದ್ದಾರೆ. ಇದೇ ಕಾರಣಕ್ಕಾಗಿಯೇ ಅಧ್ಯಕ್ಷ ಸ್ಥಾನಕ್ಕೆ ಹೊಸದಾಗಿ ಯಾರನ್ನು ಕೂಡ ಆಯ್ಕೆ ಮಾಡಿಲ್ಲ. ಅಲ್ಲದೇ, ಕಳೆದ ಬಾರಿ ಲಿಂಗಾಯಿತ ಸಮುದಾಯಕ್ಕೆ ಅಧ್ಯಕ್ಷ ಸ್ಥಾನ ನೀಡಲಾಗಿತ್ತು. ಈ ಬಾರಿ ಬೇರೆ ಸಮುದಾಯಗಳಿಗೆ ಮಣೆ ಹಾಕಬೇಕೆಂಬ ಒತ್ತಾಯವೂ ಕೂಡ ಜೋರಾಗಿದ್ದು, ಇದರ ಪರಿಣಾಮ ಅಧ್ಯಕ್ಷ ಸ್ಥಾನದ ಆಯ್ಕೆಗೆ ಹೈಕಮಾಂಡ್ ತಡೆಯೊಡ್ಡಿದೆ ಎಂದು ಸಾರ್ವಜನಿಕ ವಲಯದಲ್ಲಿ ಚರ್ಚೆಯಾಗುತ್ತಿದೆ.

## ಏ.20ಕ್ಕೆರಾಜ್ಯ ಗೊಲ್ಲ ಸಂಘದ ಶತಮಾನೋತ್ಸವ

» ಚಿತ್ರದುರ್ಗ



ಕರ್ನಾಟಕ ರಾಜ್ಯ ಗೊಲ್ಲ (ಯಾದವ) ಸಂಘದ ಶತಮಾನೋತ್ಸವ ಹಾಗೂ ಶ್ರೀ ಯಾದವಾನಂದ ಸ್ವಾಮಿಗಳ 16ನೇ ಪಟ್ಟಾಭಿಷೇಕ ಸಮಾರಂಭವೂ ಏ. 20ರ ಭಾನುವಾರ ಮಧ್ಯಾಹ್ನ 3 ಗಂಟೆಗೆ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಅಮಟೂರು ಬಾಳಪ್ಪರವರ ಸ್ಮರಣಾರ್ಥ ಮಂಟಪದ ಹಮ್ಮಿಕೊಳ್ಳಲಾಗಿದೆ ಎಂದು ವಿಧಾನ ಪರಿಷತ್ ಸದಸ್ಯರು ಕರ್ನಾಟಕ ರಾಜ್ಯ ಗೊಲ್ಲ ಸಂಘದ ಅಧ್ಯಕ್ಷರಾದ ಡಿ.ಟಿ.ಶ್ರೀನಿವಾಸ್ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ರಾಜ್ಯ ಗೊಲ್ಲ (ಯಾದವ) ಸಂಘವು 1924ರಲ್ಲಿ ಅಸ್ತಿತ್ವಕ್ಕೆ ಬಂದಿರುತ್ತದೆ. ಸದರಿ ಸಂಘವು ಹಲವಾರು ಹಿರಿಯರ ಮಾರ್ಗದರ್ಶನದಲ್ಲಿ ನಡೆದುಕೊಂಡು ಬಂದು 2024ಕ್ಕೆ 100 ವರ್ಷಗಳನ್ನು ಪೂರೈಸಿರುತ್ತದೆ. ಕರ್ನಾಟಕ ರಾಜ್ಯದಲ್ಲಿ ಸುಮಾರು 25 ರಿಂದ 30 ಲಕ್ಷಗಳಷ್ಟು ಗೊಲ್ಲ ಜನಾಂಗವಿದ್ದು ಗೊಲ್ಲ, ಗೋಪಾಲ, ಹಣಬರು, ಯಾದವ, ಕಾಡುಗೊಲ್ಲ, ಆಸ್ತನಾಗೊಲ್ಲ, ಯಾದವ್, ಅಡವಿಗೊಲ್ಲ, ಗೋಪಾಲಿ, ಗೌಳಿ, ಗೌಲಿ, ಗಾವಲಿ, ಗಾವಿ, ಹಣಬರು, ಹಟಣಬರು, ಕಾವಡಿ, ಕೊಲಾಯನ್, ಕೋನಾರ್, ಕೊನ್ನೂರ್. ಕೃಷ್ಣ ಗಾವಲಿ, ಕೃಷ್ಣಗೊಲ್ಲ, ಮಣಿಯಾನಿ, ಊರಾಲಿ ಜಾತಿಗಳಿಂದ ಗುರುತಿಸಲ್ಪಟ್ಟಿರುತ್ತದೆ.


ಪುಟ ↘ 2


## ಜೂಜಾಟ ಪ್ರಕರಣ ಪತ್ತೆ: ಹಣವಶ

» ಚಳ್ಳಕೆರೆ

ಚಳ್ಳಕೆರೆ ವೃತ್ತ ವ್ಯಾಪ್ತಿಯಲ್ಲಿ ಇಸ್ಪೀಟ್ ಜೂಜಾಟವನ್ನು ನಿಯಂತ್ರಿಸಲು ಪೊಲೀಸ್ ಇಲಾಖೆ ನಿರಂತರ ಪ್ರಯತ್ನ ನಡೆಸುತ್ತಿದ್ದರೂ ಸಹ ಜೂಜುಕೋರರು ತಮ್ಮ ವರಸೆಯನ್ನು ಮುಂದುವರೆಸಿದ್ದಾರೆ.

ಯುಗಾದಿ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆ ಜೂಜುಕೋರರ ಚಲನವನಲದ ಮೇಲೆ ಕಣ್ಣಿಟ್ಟಿದ್ದರೂ ಸಹ ಪೊಲೀಸ್ ಇಲಾಖೆ ಕಣ್ಣುತಪ್ಪಿಸಿ ಜೂಜಾಟವನ್ನು ಮುಂದುವರೆಸಿದ್ದಾರೆ. ತಾಲ್ಲೂಕಿನ ರೆಡ್ಡಿಹಳ್ಳಿ ಗ್ರಾಮದ ಈಶ್ವರದೇವಸ್ಥಾನದ ಸಾರ್ವಜನಿಕ ರಸ್ತೆಯಲ್ಲಿ ಅದೇ ಗ್ರಾಮದ ರಾಜಣ್ಣ(60) ಇತರೆಯವರೊಂದಿಗೆ ಜೂಜಾಟವಾಡುತ್ತಿದ್ದು, ಮಾಹಿತಿ ಪಡೆದ ಪೊಲೀಸ್ ಸ್ಥಳಕ್ಕೆ ಭೇಟಿ ನೀಡಿ ಅವರನ್ನು ವಶಕ್ಕೆ ಪಡೆದು ಜೂಜಾಟದ ಹಣ 3450ರೂ ವಶಪಡಿಸಿಕೊಂಡಿದ್ದಾರೆ.

**ಪ್ರಮುಖ ಸುದ್ದಿ**

# ಭತ್ತಯ್ಯನಹಟ್ಟಿ: ಆರು ತಿಂಗಳಿನಿಂದ ದುರಸ್ಥಿಯಾಗದ ಶುದ್ಧಕುಡಿಯುವ ನೀರಿನ ಘಟಕ: ಗ್ರಾಮಸ್ಥರ ಪರದಾಟ

» ಚಳ್ಳಕೆರೆ

ತಾಲ್ಲೂಕಿನ ಭತ್ತಯ್ಯನಹಟ್ಟಿ ಗ್ರಾಮದ ಶುದ್ಧಕುಡಿಯುವ ನೀರಿನ ಘಟಕ ಕಳೆದ ಆರು ತಿಂಗಳಿನಿಂದ ತಟಸ್ಥವಾಗಿ ಗ್ರಾಮಸ್ಥರು ಪ್ರತಿನಿತ್ಯ ಕುಡಿಯುವ ನೀರಿಗಾಗಿ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ.





ಗ್ರಾಮದ ಮುಖಂಡರಾದ ಡಿ.ಟಿ.ಸುರೇಶ್, ಕೆ.ಪಾಲಯ್ಯ, ಮಹಾಂತೇಶ್, ಓಬಯ್ಯ, ಕಾಟಯ್ಯ ಮುಂತಾದವರು ಈ ಬಗ್ಗೆ ಮಾಹಿತಿ ನೀಡಿ, ಶುದ್ಧ ಕುಡಿಯುವ ನೀರಿನ ಘಟಕ ರಿಪೇರಿ ಕೈಗೊಳ್ಳುವಂತೆ ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗೂ ಅಧ್ಯಕ್ಷರಿಗೆ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಇತ್ತೀಚೆಗೆ ಯಾರೋ ಕಿಡಿಗೇಡಿಗಳು ಕುಡಿಯುವ ನೀರಿನ ಘಟಕ ಗ್ಲಾಸ್‌ನ್ನು ಹೊಡೆದುಹಾಕಿದ್ದಾರೆ. ಸಾವಿರಾರು ರೂಪಾಯಿ ಬೆಲೆಬಾಳುವ ಯಂತ್ರಗಳು ಕಳ್ಳಕಾಕರ ಕೈಗೆ ಸಿಕ್ಕಿ ಹಾಳಾಗುವ ಮುಚ್ಚೆ ಎಚ್ಚರಿಕೆ ವಹಿಸಬೇಕು, ಇದರಿಂದ ಗಾಳಿ, ದೂಳು ಎಲ್ಲವೂ ಕುಡಿಯುವ ನೀರಿನ ಘಟಕ ಯಂತ್ರಕ್ಕೆ ಸೇರಿ ಘಟಕ ಹಾಳಾಗುವ ಸ್ಥಿತಿ ನಿರ್ಮಾಣವಾಗಿದೆ. ಪ್ರತಿನಿತ್ಯ ಗ್ರಾಮಸ್ಥರು ಕುಡಿಯುವ ನೀರಿಗಾಗಿ ಅಲೆದಾಡುವ ಸ್ಥಿತಿ ನಿರ್ಮಾಣವಾಗಿದೆ. ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಕುಡಿಯುವ ನೀರಿನ ಘಟಕದ ದುರಸ್ಥಿ ಮಾಡಿ ನೀರಿನ ವ್ಯವಸ್ಥೆ ಮಾಡಬೇಕೆಂದು ಅವರು ಮನವಿ ಮಾಡಿದ್ದಾರೆ.

ಈ ಬಗ್ಗೆ ತಾಲ್ಲೂಕು ಪಂಚಾಯಿತಿ ಅಧಿಕಾರಿಗಳಿಗೂ ದೂರು ನೀಡಿದ್ದರೂ ಸಬೂಬು ಹೇಳಿ ಕಳಿಸುತ್ತಿದ್ದಾರೆ. ಗ್ರಾಮದಲ್ಲಿ ಜನರು ಕೂಲಿ ಕೆಲಸ ಬಿಟ್ಟು ಕುಡಿಯುವ ನೀರಿಗಾಗಿ ತೋಟಗಳತ್ತ ಅಲೆದಾಡುವಪರಿಸ್ಥಿತಿನಿರ್ಮಾಣವಾಗಿದೆ. ಬೇಸಿಗೆ ಕಾಲವಾದ್ದರಿಂದ ಕುಡಿಯುವ ನೀರು ಸಿಗದೆ ಪರದಾಡುವ ಸ್ಥಿತಿ ನಿರ್ಮಾಣವಾಗುತ್ತಿದೆ. ಈಗಲಾದರೂ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಘಟಕ ದುರಸ್ಥಿ ಮಾಡಿಸಬೇಕೆಂದರು.

## ಫಾಸ್ಟ್ ನ್ಯೂಸ್

### ಏ.13ರಂದು ಅಬ್ಬಿನಹೊಳೆ ಶ್ರೀ ರಂಗನಾಥಸ್ವಾಮಿ ಬ್ರಹ್ಮರಥೋತ್ಸವ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕು ಅಬ್ಬಿನಹೊಳೆ ಗ್ರಾಮದ ಶ್ರೀ ರಂಗನಾಥಸ್ವಾಮಿ ಜಾತ್ರಾ ಮಹೋತ್ಸವ ಇದೇ ಏಪ್ರಿಲ್ 01 ರಿಂದ ಪ್ರಾರಂಭವಾಗಿದ್ದು, ಏ.16 ರವರೆಗೆ ನಡೆಯಲಿದೆ. ಏ.8ರಂದು ಶ್ರೀ ಸ್ವಾಮಿ ಗಂಗಾಪೂಜೆ, ಏ.09ರಂದು ಮಖಾ ನಕ್ಷತ್ರದಲ್ಲಿ ಕಂಕಣಧಾರಣೆ, ಅಂಕುರಾರ್ಪಣದ ಕಳಸ ಸ್ಥಾಪನೆ, ಹೋಮ, ಏ.10ರಂದು ಧ್ವಜಾರೋಹಣ, ಅಗ್ನಿ ಪ್ರತಿಷ್ಠೆ, ಮೂರ್ತಿ ಹೋಮಾದಿಗಳು ಸಂಜೆ ಸಿಂಹ ವಾಹನೋತ್ಸವ, ಏ.11ರಂದು ರಾತ್ರಿ ಹನ್ಮಂತ ಮಹೋತ್ಸವ, ಏ.12ರಂದು ಬೆಳಗಿನ ಜಾವ 3 ರಿಂದ 4ಕ್ಕೆ ಗರುಡೋತ್ಸವ, ಬೆಳಗಿನ ಜಾವ4 ರಿಂದ 6 ರವರೆಗೆ ಕಲ್ಯಾಣೋತ್ಸವ, ಬೆಳಿಗ್ಗೆ 9 ರಿಂದ 11 ರವರೆಗೆ ಗಜೇಂದ್ರ ಮೋಕ್ಷ, ಬೆಳಿಗ್ಗೆ 11ಕ್ಕೆ ಕುಂಭಲಗ್ನದಲ್ಲಿ ಹೋಮಾದಿ ಕಾರ್ಯಕ್ರಮ, ನೂತನ ರಥ ಸಂಪ್ರೋಕ್ಷಣೆ ಹಾಗೂ ಕಳಸ ಸ್ಥಾಪನೆ, ಏ.13ರಂದು ಬೆಳಿಗ್ಗೆ 11.30 ರಿಂದ 12.30ರವರೆಗೆ ಮೂರ್ತಿ ಹೋಮಾದಿ ಕಾರ್ಯಗಳು ಬ್ರಹ್ಮರಥೋತ್ಸವ ನಡೆಯಲಿದೆ. ಸಂಜೆ 6ಕ್ಕೆ ರಥ ಅಭಿವೃದ್ಧಿ ದಾನಿಗಳಿಗೆ ಸನ್ಮಾನ ಸಮಾರಂಭ, ರಾತ್ರಿ 8.30ಕ್ಕೆ ಓಂಶಕ್ತಿ ಆರ್ಕೆಸ್ಟ್ರಾ, ಹಾವೇರಿ ಇವರಿಂದ ವಾದ್ಯಗೋಷ್ಠಿ, ರಾತ್ರಿ ಧೂಳೋತ್ಸವ ಮತ್ತು ದೃಷ್ಠಿ ಕಾರ್ಯ, ಏ.14ರಂದು ಮೂರ್ತಿ ಹೋಮಾದಿ ಕಾರ್ಯಕ್ರಮಗಳು, ಮೃಗ ಯಾತ್ರೋತ್ಸವ, ಏ.15ರಂದು ಜಲ ಕ್ರೀಡೋತ್ಸವ, ವಸಂತೋತ್ಸವ, ಧ್ವಜಾ ಅವರೋಹಣ, ಕಂಕಣ ವಿಸರ್ಜನೆ, ಪೂರ್ಣಾಹುತಿ, 101 ಮಂಗಳಾರತಿ, ರಾತ್ರಿ ಶಯನೋತ್ಸವ ನಡೆಯಲಿದೆ. ಏ.16ರಂದು ಶ್ರೀ ಕಣಿವೆ ಮಾರಮ್ಮದೇವಿಗೆ ಸುಮಂಗಲೆಯರಿಂದ ಆರತಿ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

### ಏ. 15 ರಿಂದ ಸರ್ಕಾರಿ ನೌಕರರ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆ



» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಸಂಯುಕ್ತಾಶ್ರಯದಲ್ಲಿ ರಾಜ್ಯ ಸರ್ಕಾರಿ ನೌಕರರ ವಾರ್ಷಿಕ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳು ಏ. 15 ಮತ್ತು 16 ರಂದು ಎರಡು ದಿನಗಳ ಕಾಲ ನಗರದ ವೀರವನಿತೆ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದೆ.

ವಾರ್ಷಿಕ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು ಮಹಿಳೆಯರಿಗೆ ಮತ್ತು ಪುರುಷರಿಗೆ ವಯೋಮಾನ ಆಧಾರದಲ್ಲಿ ಪ್ರತ್ಯೇಕವಾಗಿ ಆಯೋಜಿಸಲಾಗಿದ್ದು, ವಿವಿಧ ಕ್ರೀಡೆಗಳು, ಈಜು ಸ್ಪರ್ಧೆ, ಸಂಗೀತ ಹಾಗೂ ನೃತ್ಯ ಸ್ಪರ್ಧೆಗಳು ಜರುಗಲಿವೆ. ಈ ಬಾರಿ ವಿಶೇಷವಾಗಿ ಯೋಗ ಸ್ಪರ್ಧೆಯನ್ನು ಸೇರ್ಪಡೆ ಮಾಡಲಾಗಿದೆ. ಕ್ರೀಡಾ ವಿಭಾಗದಲ್ಲಿ ಮಹಿಳೆಯರಿಗೆ ವಾಲಿಬಾಲ್, ಕಬಡ್ಡಿ, ಟೇಬಲ್ ಟೆನ್ನಿಸ್, ಟೆನ್ನಿಸ್, ಷಟಲ್ ಬ್ಯಾಡ್ಮಿಂಟನ್, ಚೆಸ್, ಟೆನ್ನಿಕಾಯ್ಟ್, ಥ್ರೋಬಾಲ್, ಯೋಗ ಮತ್ತು ಖೋಖೋ ಸ್ಪರ್ಧೆಗಳು ನಡೆಯಲಿದ್ದು, ಪುರುಷರ ವಿಭಾಗದಲ್ಲಿ ಫುಟ್ಬಾಲ್, ವಾಲಿಬಾಲ್, ಹಾಕಿ, ಕಬಡ್ಡಿ, ಟೇಬಲ್ ಟೆನ್ನಿಸ್, ಟೆನ್ನಿಸ್, ಬಾಲ್ ಬ್ಯಾಡ್ಮಿಂಟನ್, ಬಾಸ್ಕೆಟ್ ಬಾಲ್, ಚೆಸ್, ಯೋಗ ಮತ್ತು ಖೋಖೋ ಸ್ಪರ್ಧೆ ಏರ್ಪಡಿಸಲಾಗಿದೆ. ಈಜು ಸ್ಪರ್ಧೆಯಲ್ಲಿ ಮಹಿಳೆಯರಿಗೆ ಮತ್ತು ಪುರುಷರಿಗೆ ಪ್ರತ್ಯೇಕ ವಿಭಾಗವಿದ್ದು, ಫ್ರೀ ಸ್ಟೈಲ್, ಬ್ಯಾಕ್ ಸ್ಟ್ರೋಕ್, ಫ್ರೀ ಸ್ಟೈಲ್ ರಿಲೇ ಸೇರಿದಂತೆ ವಿವಿಧ ಸ್ಪರ್ಧೆಗಳಿವೆ. ಅಥ್ಲೆಟಿಕ್ಸ್ ವಿಭಾಗದಲ್ಲಿ 100 ಮೀ., 200, 400, 800 ಹಾಗೂ 1500 ಮೀ. ಓಟದ ಸ್ಪರ್ಧೆ, ಲಾಂಗ್ ಜಂಪ್, ಹೈ ಜಂಪ್, ಶಾಟ್‌ಪುಟ್, ಡಿಸ್ಕಸ್ ಥ್ರೋ ಸ್ಪರ್ಧೆಗಳಿವೆ. ಕುಸ್ತಿ, ಭಾರ ಎತ್ತುವ ಸ್ಪರ್ಧೆ, ಪವರ್ ಲಿಫ್ಟಿಂಗ್ ಹಾಗೂ ದೇಹದಾರ್ಢ್ಯ ಸ್ಪರ್ಧೆಗಳು ಜರುಗಲಿವೆ. ಸಾಂಸ್ಕೃತಿಕ ಸ್ಪರ್ಧೆಗಳ ವಿಭಾಗದಲ್ಲಿ ಹಿಂದೂಸ್ತಾನಿ ಸಂಗೀತ, ಲಘು ಶಾಸ್ತ್ರೀಯ ಸಂಗೀತ, ಕರ್ನಾಟಕ ಶಾಸ್ತ್ರೀಯ ಸಂಗೀತ, ಜಾನಪದ ಗೀತೆ ಸ್ಪರ್ಧೆಗಳನ್ನು ಆಯೋಜಿಸಿದ್ದು, ನೃತ್ಯ ವಿಭಾಗದಲ್ಲಿ ಕಥಕ್, ಮಣಿಪುರಿ, ಕೂಚುಪುಡಿ, ಕಥಕ್ಕಳಿ, ಒಡಿಸ್ಸಿ, ಭರತನಾಟ್ಯ, ಜಾನಪದ ನೃತ್ಯ ಸ್ಪರ್ಧೆಗಳು. ವಾದ್ಯ ಸಂಗೀತ ವಿಭಾಗದಲ್ಲಿ ಸ್ಟ್ರಿಂಗ್ ವಾದ್ಯಗಳು, ವಿಂಡ್ ವಾದ್ಯಗಳು, ಪರಕೇಷರ್ ವಾದ್ಯಗಳು. ಕರಕುಶಲ ವಸ್ತುಗಳ ಪ್ರದರ್ಶನ ಮತ್ತು ನಾಟಕ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ರಾಜ್ಯ ಸರ್ಕಾರದ ಎಲ್ಲಾ ಖಾಯಂ ನೌಕರರು ಮೇಲೆ ತಿಳಿಸಿದ ಎಲ್ಲ ಸ್ಪರ್ಧೆಗಳಲ್ಲಿ ಭಾಗವಹಿಸಲು ಅರ್ಹರಿದ್ದು. ಏಪ್ರಿಲ್ 11 ರ ಒಳಗಾಗಿ https://forms.gle/VhHQciognY8RpjCA6 ಲಿಂಕ್‌ನಲ್ಲಿ ವಿವರ ಭರ್ತಿ ಮಾಡಿ ಆನ್‌ಲೈನ್‌ನಲ್ಲಿ ನೊಂದಣಿಮಾಡಿಕೊಳ್ಳಬೇಕು.ಎಲ್ಲಕ್ರೀಡಾಪಟುಗಳು ಇಲಾಖಾ ಮುಖ್ಯಸ್ಥರಿಂದ ನೀಡಲಾದ ಅಧಿಕೃತ ಗುರುತಿನ ಚೀಟಿ ಕಡ್ಡಾಯವಾಗಿ ಸಲ್ಲಿಸಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಜಿಲ್ಲೆಯ ಎಲ್ಲ ಸರ್ಕಾರಿ ನೌಕರರು ಏ. 15 ಮತ್ತು 16 ರಂದು ಎರಡು ದಿನಗಳ ಕಾಲ ಜರುಗುವ ವಾರ್ಷಿಕ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ಅಧ್ಯಕ್ಷ ಮಾಲತೇಶ ಮುದಜ್ಜಿ ಮನವಿ ಮಾಡಿದ್ದಾರೆ.

# ಲಿಂಗಾಯಿತ ಸಮಾಜ ಅತಿ ದೊಡ್ಡ ಸಮಾಜ

» ಚಿತ್ರದುರ್ಗ

ಹನ್ನೆರಡನೆ ಶತಮಾನದಲ್ಲಿ ಬಸವಣ್ಣ ಅನುಭವ ಮಂಟಪದಲ್ಲಿ ಸಾಮಾಜಿಕ ನ್ಯಾಯ, ಸ್ವಾತಂತ್ರ್ಯ ನೀಡದಿದ್ದರೆ ಲಿಂಗಾಯಿತ ಸಮಾಜ ಇರುತ್ತಿರಲಿಲ್ಲ ಎಂದು ಬೃಹನ್ಮಠದ ಡಾ.ಬಸವಪ್ರಭು ಸ್ವಾಮೀಜಿ ಹೇಳಿದರು.

ಜಿಲ್ಲಾ ವೀರಶೈವ ಲಿಂಗಾಯಿತ ನೌಕರರ ಕ್ಷೇಮಾಭಿವೃದ್ದಿ ಸಂಘದಿಂದ ಮುರುಘಾಮಠದ ಅಲ್ಲಮಪ್ರಭು ಸಂಶೋಧನಾ ಕೇಂದ್ರದಲ್ಲಿ ನಡೆದ ಜಿಲ್ಲಾ ಘಟಕದ ಪದಾಧಿಕಾರಿಗಳ ಪದಗ್ರಹಣ ಹಾಗೂ ವೀರಶೈವ ಲಿಂಗಾಯಿತ ನೌಕರರ ಸಮಾವೇಶದ ಸಾನಿಧ್ಯ ವಹಿಸಿ ಮಾತನಾಡಿದರು.

ಸಮಾಜದಲ್ಲಿ ನೊಂದವರ ಪರವಾಗಿ ನಿಲ್ಲುವುದೇನಿಜವಾದಧರ್ಮ.ಲಿಂಗಾಯಿತ ಸಮಾಜ ಅತಿ ದೊಡ್ಡ ಸಮಾಜ. ಆದರೆ ಒಳ ಪಂಗಡವೆಂದುಕೊಂಡು ಸಂಘಟನೆಯಲ್ಲಿ ಹಿಂದೆ ಬಿದ್ದಿದೆ. ಒಳ ಪಂಗಡವನ್ನು ಮರೆತು ಎಲ್ಲರೂ ಒಂದಾಗಿ ಹೋಗಬೇಕು. ಮದುವೆ ಸಂದರ್ಭದಲ್ಲಿ ಮಾತ್ರ ಲಿಂಗ ದೀಕ್ಷೆ ತೆಗೆದುಕೊಳ್ಳುವುದು ಸರಿಯಲ್ಲ. ಯಾವಾಗಲೂ ಕೊರಳಲ್ಲಿ ಲಿಂಗವಿರಬೇಕು. ಇಷ್ಟಲಿಂಗವನ್ನು ತದೇಕ




ಚಿತ್ತದಿಂದ ಪೂಜಿಸಿ, ಧ್ಯಾನಿಸಿದರೆ ಒತ್ತಡ, ಕಷ್ಟ, ದುಃಖ ನಿವಾರಣೆಯಾಗುತ್ತದೆ. ಹಾಗಾಗಿ ಇಷ್ಟಲಿಂಗದ ಪೂಜೆಯನ್ನು ಬಿಡಬೇಡಿ. ಧರ್ಮ ಸಂಸ್ಕೃತಿಯನ್ನು ಎಂದಿಗೂ ಮರೆಯಬಾರದು ಎಂದು ವೀರಶೈವ ಲಿಂಗಾಯಿತರಿಗೆ ತಿಳಿಸಿದರು.

ಜಿಲ್ಲಾ ವೀರಶೈವ ಲಿಂಗಾಯಿತ ನೌಕರರ ಕ್ಷೇಮಾಭಿವೃದ್ದಿ ಸಂಘದ ಜಿಲ್ಲಾಧ್ಯಕ್ಷ ಬಿ.ವೀರೇಶ್ ಅಧ್ಯಕ್ಷತೆವಹಿಸಿ ಮಾತನಾಡುತ್ತ ವೀರಶೈವ ಲಿಂಗಾಯಿತರಲ್ಲಿ ಎಂದಿಗೂ ಒಳಪಂಗಡಗಳ ಚರ್ಚೆಯಾಗಬಾರದು. ಲಿಂಗಾಯಿತ ನೌಕರರು ಸಾಕಷ್ಟು ಕಷ್ಟ ಅನುಭವಿಸುತ್ತಿರುವುದಕ್ಕೆ ನಮ್ಮಲ್ಲಿ ಒಗ್ಗಟ್ಟು ಇಲ್ಲದಿರುವುದು ಕಾರಣ. ಎಲ್ಲಾ ಇಲಾಖೆಗಳಲ್ಲಿರುವ ಲಿಂಗಾಯಿತ ನೌಕರರನ್ನು ಸಂಘಕ್ಕೆ ಸೇರ್ಪಡೆ ಮಾಡಿಕೊಳ್ಳಬೇಕಿದೆ. ಬಸವ ಜಯಂತಿಯಲ್ಲಿ ಕನಿಷ್ಟ ಐದುನೂರು ವೀರಶೈವ ಲಿಂಗಾಯಿತರಾದರು ಸೇರಿ ಶಕ್ತಿ ಪ್ರದರ್ಶಿಸಬೇಕು. ವಧು-ವರರ ಸಮಾವೇಶ, ಪ್ರತಿಭಾ ಪುರಸ್ಕಾರ, ನಿವೃತ್ತ ನೌಕರರಿಗೆ ಹಾಗೂ ಸಾಧಕರುಗಳಿಗೆ ಗೌರವಿಸೋಣ. ಇದಕ್ಕೆ ಎಲ್ಲರ ಸಹಕಾರ ಮುಖ್ಯ ಎಂದು ಕೋರಿದರು.

ವೀರಶೈವ ಲಿಂಗಾಯಿತ ನೌಕರರ ಕ್ಷೇಮಾಭಿವೃದ್ದಿ ಸಂಘದ ಮಾಜಿ ಜಿಲ್ಲಾಧ್ಯಕ್ಷ ನಾಗರಾಜ್ ಸಂಗಮ್ ಮಾತನಾಡಿ ವೀರಶೈವ ಲಿಂಗಾಯಿತ ನೌಕರರು ಸಾಕಷ್ಟು ತೊಂದರೆಗಳನ್ನು ಅನುಭವಿಸುತ್ತಿದ್ದಾರೆ. ಜಿಲ್ಲಾ ಪಂಚಾಯಿತಿಯಲ್ಲಿ ನಾನು ಕೆಲಸ ಮಾಡುವಾಗ ಹಲವಾರು ಅಡ್ಡಿ ಆತಂಕಗಳನ್ನು ಎದುರಿಸಿದ್ದೇನೆ. ನಮ್ಮ ಜನಾಂಗದ ಅಧಿಕಾರಿಗಳಿಂದಲೆ ನಮಗೆ ಬೆಂಬಲವಿಲ್ಲದಂತಾಗಿದೆ. ಸಂಘಟನೆಯಿಲ್ಲದಿದ್ದರೆ ಏನನ್ನು ಪಡೆಯಲು ಆಗುವುದಿಲ್ಲ. 2005 ರಲ್ಲಿ ಸಂಘ ಸ್ಥಾಪನೆಯಾಯಿತು.

ಪ್ರಥಮ ಸಮಾವೇಶ ಬೆಂಗಳೂರಿನಲ್ಲಿ ನಡೆಯಿತು. ಚಿತ್ರದುರ್ಗದಲ್ಲಿಯೂ ಒಮ್ಮೆ ಯಶಸ್ವಿಯಾಗಿ ಸಮ್ಮೇಳವನ್ನು ನಡೆಸಲಾಯಿತು. ವೀರಶೈವ ಲಿಂಗಾಯಿತರು ಮೊದಲು ಒಗ್ಗಟ್ಟಾಗಿ ಲಿಂಗಾಯಿತರೆಂದು ಧೈರ್ಯವಾಗಿ ಹೇಳಿಕೊಳ್ಳಿ. ಬಸವಜಯಂತಿಯಲ್ಲಿ ಪ್ರತಿ ಮನೆ ಮನೆಯಿಂದ ಕುಟುಂಬ ಸಮೇತರಾಗಿ ಪಾಲ್ಗೊಂಡು ಒಗ್ಗಟ್ಟು ತೋರಿಸಬೇಕಿದೆ. ಮಕ್ಕಳಿಗೆ ಶಿಕ್ಷಣದ ಜೊತೆ ಸಂಸ್ಕಾರ ಕಲಿಸಿ. ವೀರಶೈವ ಲಿಂಗಾಯಿತ ಜನಾಂಗದ ಬಡ ಮಕ್ಕಳ ಶಿಕ್ಷಣಕ್ಕೆ ಕೈಲಾದ ಸಹಾಯ ಮಾಡಿ ಎಂದು ವಿನಂತಿಸಿದರು.

ನಿವೃತ್ತ ಕ್ಷೇತ್ರ ಶಿಕ್ಷಣಾಧಿಕಾರಿ ತಿಪ್ಪೇಸ್ವಾಮಿ, ಕೆ.ಡಿ.ಪಿ.ಸದಸ್ಯ ಕೆ.ಸಿ.ನಾಗರಾಜ್, ವೀರಶೈವ ಸಮಾಜದ ಅಧ್ಯಕ್ಷ ಎಸ್.ಎಂ.ಎಲ್. ತಿಪ್ಪೇಸ್ವಾಮಿ, ವೀರಶೈವ ಲಿಂಗಾಯಿತ ಮಹಾಸಭಾದ ಕಾರ್ಯದರ್ಶಿ ಎಂ.ಶಶಿಧರ್‌ಬಾಬು, ಕೆ.ಇ.ಬಿ.ಷಣ್ಮುಖಪ್ಪ, ಚಿದಾನಂದಪ್ಪ ಇವರುಗಳು ವೇದಿಕೆಯಲ್ಲಿದ್ದರು.

# ರಾಮನವಮಿ; ರಾಮನ ಧಯೆಯಿಂದ ಎಲ್ಲರ ಸಮಸ್ಯೆಗಳಿಗೆ ಪರಿಹಾರ ಸಾಧ್ಯ: ರಘುಮೂರ್ತಿ

» ಚಳ್ಳಕೆರೆ

ಇತಿಹಾಸದ ಚರಿತ್ರೆಯಲ್ಲಿ ಪ್ರಭುಶ್ರೀರಾಮಚಂದ್ರನ ಹೆಸರು ಸದಾಕಾಲ ಶಾಶ್ವತವಾಗಲಿರಲಿದೆ. ಶ್ರೀರಾಮಚಂದ್ರನು ನಡೆದುಕೊಂಡ ರೀತಿ ಎಲ್ಲರಿಗೂ ಮಾದರಿಯಾಗಿದೆ. ರಾಜನಾದರೂ ಒಬ್ಬ ಸೇವಕನಂತೆ ಕೆಲಸ ನಿರ್ವಹಿಸುವ ಮೂಲಕ ಸಮಾಜಕ್ಕೆ ಮಾದರಿ. ನಂಬಿದ ಭಕ್ತರಿಗೆ ಸನ್ಮಾರ್ಗವನ್ನುಂಟು ಮಾಡುವ ಶಕ್ತಿ ಶ್ರೀರಾಮನಲ್ಲಿದೆ ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿನಿಗಮ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಸೋಮವಾರ ಪರಶುರಾಮಪುರ ಹೋಬಳಿಯ ಪಿ.ಮಹದೇವಪುರ ಗ್ರಾಮದ ಶ್ರೀಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಶ್ರೀರಾಮೋತ್ಸವ ಸಮಿತಿ ಮೂರುದಿನಗಳ ಕಾಲ ಹಮ್ಮಿಕೊಂಡಿದ್ದ ರಾಮನವಮಿ ಉತ್ಸವದಲ್ಲಿ ಭಾಗವಹಿಸಿ ಮಾತನಾಡಿದರು. ಎಲ್ಲೆಡೆ ಶ್ರೀರಾಮನ ಭಕ್ತರ ಸಂಖ್ಯೆ ಹೆಚ್ಚುತ್ತಿದೆ, ಪ್ರಸ್ತುತ ಈ ಗ್ರಾಮದಲ್ಲೂ ಈ ಕಾರ್ಯಕ್ರಮಕ್ಕೆ ಸುತ್ತಮುತ್ತಲ ಜನರು ಸೇರಿ ನೂರಾರು ಸಂಖ್ಯೆಯಲ್ಲಿ ಭಾಗವಹಿಸಿದ್ದೀರ, ಶ್ರೀರಾಮನ ಬಗ್ಗೆ ಅಪಾರವಾದ ಭಕ್ತಿ, ಶ್ರದ್ದೆಯನ್ನು ನೀವೆಲ್ಲಾ ಹೊಂದಿದ್ದೀರಿ, ಶ್ರೀರಾಮನ ನಾಮದಲ್ಲಿ ವಿಶೇಷ ಶಕ್ತಿ ಅಡಗಿದೆ ಎಂದರು.



ಉತ್ಸವ ಸಮಿತಿಯ ಗೌರವಾಧ್ಯಕ್ಷರಾದ ನಿವೃತ್ತ ಶಿಕ್ಷಕ ಎಂ.ನಾಗರಾಜರಾವ್ ಮಾತನಾಡಿ, ಕಳೆದ ಹತ್ತಾರು ವರ್ಷಗಳಿಂದ ಗ್ರಾಮದಲ್ಲಿ ನಡೆಯುವ ಈ ಕಾರ್ಯಕ್ರಮಕ್ಕೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಎಲ್ಲರಮೇಲೆ ವಿಶ್ವಾಸವಿಟ್ಟು ತಪ್ಪದೆ ಆಗಮಿಸುತ್ತಿದ್ದಾರೆ, ಗ್ರಾಮಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಆಲಿಸಿ ಪರಿಹರಿಸುತ್ತಾರೆ. ಗ್ರಾಮದ ಜನರ ಮೇಲೆ ಅವರಿಗೆ ಅಪಾರವಾದ ವಿಶ್ವಾಸವಿದೆ, ಪ್ರಭುಶ್ರೀರಾಮಚಂದ್ರ ಮುಂದಿನ ದಿನಗಳಲ್ಲಿ ಅವರಿಗೆ ರಾಜಕೀಯ ಕ್ಷೇತ್ರದಲ್ಲಿ ಉತ್ತಮ ಸ್ಥಾನ ನೀಡಲಿ ಎಂದು ಶ್ರೀರಾಮನನ್ನು ಪ್ರಾರ್ಥಿಸುವುದಾಗಿ ತಿಳಿಸಿದರು.

ಜಿಲ್ಲಾ ಗ್ಯಾರಂಟಿ ಸಮಿತಿ ಸದಸ್ಯ ಚನ್ನಕೇಶವ, ಮಾಜಿಜಿಲ್ಲಾಪಂಚಾಯಿತಿಸದಸ್ಯಜಯಕುಮಾರ್, ಪರಶುರಾಮಪುರ ಬ್ಲಾಕ್‌ಕಾಂಗ್ರೆಸ್ ಅಧ್ಯಕ್ಷ ಜಿ.ಟಿ.ಶಶಿಧರ, ತ್ಯಾಗರಾಜ, ಮಹಾಲಿಂಗೇಗೌಡ, ನಿಂಗಪ್ಪ, ರಾಜಶೇಖರ, ನಿವೃತ್ತ ಕಾರ್ಮಿಕ ಇಲಾಖೆ ಜಂಟಿ ನಿರ್ದೇಶಕ ರಮೇಶ್, ಎಂ.ಸತ್ಯನಾರಾಯಣರಾವ್, ವೆಂಕಟೇಶ್, ಶ್ರೀನಿವಾಸ್‌ಮೂರ್ತಿ ಉಪಸ್ಥಿತರಿದ್ದರು.

## ಗೊಲ್ಲ ಸಂಘದ ಶತಮಾನೋತ್ಸವ



» ಮೊದಲ ಪುಟದಿಂದ

ಈ ಜನಾಂಗವು ಕರ್ನಾಟಕ ರಾಜ್ಯದಲ್ಲಿ ರಾಜಕೀಯವಾಗಿ, ಆರ್ಥಿಕವಾಗಿ, ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಬಹಳ ಹಿಂದುಳಿದಿದ್ದು, ಸಂಘಟನೆಯ ಮೂಲಕ ಬಲವರ್ಧನೆಗೊಳ್ಳಲು ಎಲ್ಲಾ ಪ್ರಯತ್ನಗಳನ್ನು ಸಂಘವೂ ಮಾಡುತ್ತಿದೆ ಎಂದರು.

ಬೆಂಗಳೂರು ದಕ್ಷಿಣ ಜಿಲ್ಲೆ, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ.30ರಲ್ಲಿ 4 ಎಕರೆ ಜಮೀನನ್ನು ಶ್ರೀ ಯಾದವಾನಂದ ಸ್ವಾಮೀಜಿಗಳ ಶಾಖಾ ಮಠ ಹಾಗೂ ಗೋಶಾಲೆ ನಿರ್ಮಾಣಕ್ಕೆ ಮಂಜೂರು ಮಾಡುವಂತೆ ಕೋರಿ ಪ್ರಸ್ತಾವನೆ ಸರ್ಕಾರದ ಹಂತದಲ್ಲಿದೆ.ಶ್ರೀಗಳ 16ನೇ ವರ್ಷದ ಪಟ್ಟಾಭಿಷೇಕವನ್ನು ಆಚರಿಸುವ ಸಲುವಾಗಿ ಹಾಗೂ ಕರ್ನಾಟಕ ರಾಜ್ಯ ಗೊಲ್ಲ (ಯಾದವ) ಹಣಬರ ಸಂಘದ ಶತಮಾನೋತ್ಸವವನ್ನು ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಆಮಬೂರು ವಾಳಪ್ಪರವರ ಸ್ಮರಣಾರ್ಥ ಮಂಟಪದಲ್ಲಿ ಆಚರಿಸಲಾಗುವುದು.

ಈ ಸಮಾರಂಭವನ್ನು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯರವರು ಉದ್ಘಾಟಿಸಲಿದ್ದು, ಉಪಮುಖ್ಯ ಮಂತ್ರಿಗಳಾದ ಡಿ.ಕೆ ಶಿವಕುಮಾರ್,ಗೃಹ ಸಚಿವರಾದ ಜಿ. ಪರಮೇಶ್ವರ್,ಲೋಕೋಪಯೋಗಿ ಇಲಾಖೆ ಸಚಿವರಾದ ಸತೀಶ್ ಜಾರಕಿಹೊಳಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಶ್ರೀಮತಿ ಲಕ್ಷ್ಮಿ ಹೆಬ್ಬಾಳ್ಕರ್ ಮಾಜಿ ಶಾಸಕರಾದ ಶ್ರೀಮತಿ ಕೆ. ಪೂರ್ಣಿಮಾ ಶ್ರೀನಿವಾಸ್, ಹಾಲಿ ಶಾಸಕ ಧೀರಜ್ ಮುನಿರಾಜು ಮತ್ತು ಎಂ. ನಾಗರಾಜ್ ಯಾದವ್ ಮತ್ತು ಬೆಳಗಾವಿ ಜಿಲ್ಲೆ ಶಾಸಕರು ಮಾಜಿ ಸಂಸದ ಪಿ. ಕೋದಂಡರಾಮಯ್ಯ ಮಾಜಿ ಶಾಸಕರಾದ ಎ.ವಿ. ಉಮಾಪತಿ ಶ್ರೀಮತಿ ಜಯಮ್ಮ ಬಾಲರಾಜ್ ಸೇರಿದಂತೆ ಇತರರು ಭಾಗವಹಿಸಲಿದ್ದಾರೆ. ಕರ್ನಾಟಕ ರಾಜ್ಯ ಗೊಲ್ಲ (ಯಾದವ) ಹಣಬರ ಸಂಘದ ಶತಮಾನೋತ್ಸವ ಪಟ್ಟಾಭಿಷೇಕವನ್ನು ವಿಜೃಂಭಣೆಯಿಂದ ಆಚರಿಸಲು ಸಿದ್ದತೆ ನಡೆದಿದ್ದು ಈ ಸಂದರ್ಭದಲ್ಲಿ ಶತಮಾನೋತ್ಸವ ಸ್ಮರಣ ಸಂಚಿಕೆ "ಯಾದವ ಸಂಪದ" : ಕೈಪಿಡಿಯನ್ನು ಬಿಡುಗಡೆ ಮಾಡಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದರು.ಇದೇ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರು ಕರ್ನಾಟಕ ರಾಜ್ಯ ಗೊಲ್ಲ ಸಂಘದ ಅಧ್ಯಕ್ಷರಾದ ಡಿ.ಟಿ.ಶ್ರೀನಿವಾಸ್‌ರವರ ಹುಟ್ಟು ಹಬ್ಬದ ಅಂಗವಾಗಿ ಅಭಿಮಾನಿಗಳು ತಂದಿದ್ದ ಕೇಕ್‌ನ್ನು ಕತ್ತರಿಸುವುದರ ಮೂಲಕ ತಮ್ಮ ಹುಟ್ಟು ಹಬ್ಬವನ್ನು ಅಭಿಮಾನಿಗಳ ಎದುರಿನಲ್ಲಿ ಆಚರಿಸಿಕೊಂಡರು, ಇದೆ ಸಮಯದಲ್ಲಿ ಅವರನ್ನು ಅವರ ಅಭಿಮಾನಿಗಳು ಶಾಲು, ಹಾರ, ತುರಾಯಿಗಳನ್ನು ನೀಡುವುದರ ಮೂಲಕ ಗೌರವಿಸಿದರು. ಜಿಲ್ಲಾ ಕಾಂಗ್ರೆಸ್ ಪಕ್ಷದ ಕಾರ್ಯಾಧ್ಯಕ್ಷರು ಸಮಾಜದ ಮುಖಂಡರಾದ ಹಾಲಸ್ವಾಮಿ, ಜಿ.ಪಂ.ಮಾಜಿ ಅಧ್ಯಕ್ಷರಾದ ಬಾಲರಾಜ್, ಉಪಾಧ್ಯಕ್ಷರಾದ ಸಿದ್ದಪ್ಪ ಉಪಸ್ಥಿತರಿದ್ದರು.

## ಮಾರುತಿ ನಗರ ನಾಮಫಲಕ ಉದ್ಘಾಟನೆ ಹಾಗೂ ಶ್ರೀರಾಮನವಮಿ

**ಪರಶುರಾಂಪುರ:** ಗ್ರಾಮದ ನಾಲ್ಕನೇ ವಾ□□ರ್‌ನಲ್ಲಿ ಶ್ರೀರಾಮನವಮಿ ಹಬ್ಬವನ್ನ ಆಚರಿಸಿದರು. ಈ ವೇಳೆಯಲ್ಲಿ ನೂತನವಾಗಿ ವಾರ್ಡ್ಗೆ ಮಾರುತಿ ನಗರದ ನಾಮ ಫಲಕವನ್ನು ಉದ್ಘಾಟಿಸಲಾಯಿತು. ಈ ವೇಳೆಯಲ್ಲಿ ನಾಮಫಲಕವನ್ನ ವಿವಿಧ ಹೂವುಗಳಿಂದ ಅಲಂಕರಿಸಿದ ಬಳಿಕ ವಿಶೇಷ ಪೂಜೆ ನೆರವೇರಿಸಿದರು. ಶ್ರೀರಾಮನವಮಿಯ ಅಂಗವಾಗಿ ಪಾನಕ, ಕೊಸಂಬರಿ ಜತೆ ಸಿಹಿಯನ್ನು ವಿತರಿಸಲಾಯಿತು. ನೂತನವಾಗಿ ವಾ□□ರ್‌ಗೆ ಶುದ್ಧ ಕುಡಿಯುವ ನೀರು ಘಟಕ ಸ್ಥಾಪನೆ ಮಾಡಿಕೊಡುವಂತೆ ಗ್ರಾಪಂ ಅಧ್ಯಕ್ಷ ರುದ್ರೇಶ್ ಅವರನ್ನು ಇಲ್ಲಿನ ನಿವಾಸಿಗಳು ಮನವಿ ಮಾಡಿದರು. ಗ್ರಾಪಂ ಅಧ್ಯಕ್ಷ ರುದ್ರೇಶ್, ಸದಸ್ಯ ನಾಗಭೂಷಣ,ಮುಖಂಡರಾದ ಮಿಲ್ಕಿ ಸಿದ್ದೇಶ್, ಅಂಜಿ, ಅಪ್ಪಾಜಿ, ಹನುಮಂತರಾಯ, ನಾಗರಾಜ ಯಾದವ, ವೆಂಕಟೇಶ್, ಶಿವಣ್ಣ, ಎಲ್.ನಾಗರಾಜ, ರಾಮ್ ಸಿಂಗ್, ರವಿ, ಸಿದ್ದಪ್ಪ, ಮಾರುತೇಶ್, ಸೂರಿ, ಸ್ವಾಮಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



## ಪ್ರಮುಖ ಸುದ್ದಿ

# ಅಂಕಪಟ್ಟಿಯನ್ನೇ ಶಿಕ್ಷಣದ ಮಾನದಂಡವನ್ನಾಗಿಸಿಕೊಂಡ ಸಂಸ್ಥೆಗಳು

» ದಾವಣಗೆರೆ

ಶಿಕ್ಷಣ ಸಂಸ್ಥೆಗಳು ಪರೀಕ್ಷೆಯನ್ನೇ ಮೂಲವಾಗಿ ಇಟ್ಟುಕೊಂಡು ಅಂಕಪಟ್ಟಿಗಳನ್ನೇ ಮಾನದಂಡವನ್ನಾಗಿ ಇಟ್ಟುಕೊಂಡು ಶಿಕ್ಷಣ ನೀಡುತ್ತಿರುವುದು ದುರಾದೃಷ್ಟಕರ ಸಂಗತಿ, ಮಕ್ಕಳಿಗೆ ವಿದ್ಯೆಯ ಜೊತೆಗೆ ದೈಹಿಕ ಮಾನಸಿಕ ಸ್ಥೈರ್ಯ, ನೈಪುಣ್ಯತೆ ಹೆಚ್ಚಿಸುವ ಕೆಲಸ ಆಗಬೇಕಾಗಿದೆ. ಮಕ್ಕಳಲ್ಲಿನ ವಿವಿಧ ಪ್ರತಿಭೆಗಳನ್ನು ಹೊರತರಬೇಕಾಗಿದೆ ಎಂದು ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್‌ಕುಮಾರ್ ಸಲಹೆ ನೀಡಿದರು.

ನಗರದ ಎಸ್.ಎಸ್.ಹೈಟೆಕ್ ಆಸ್ಪತ್ರೆ ರಸ್ತೆಯಲ್ಲಿನ ಜಯನಗರ ಬಿ ಬ್ಲಾಕಿನಲ್ಲಿರುವ ಆಲ್ಫಾಬೆಟ್ ಇಂಟರ್ ನ್ಯಾಷನಲ್ ಪ್ರಿ-ಸ್ಕೂಲ್‌ನಲ್ಲಿ ಶಿಕ್ಷಾದೀಪ್ ವಿದ್ಯಾಸಂಸ್ಥೆ ವತಿಯಿಂದ ಆಯೋಜಿಸಲಾಗಿದ್ದ ಒಂದು ತಿಂಗಳ ಕಾಲ ಬೇಸಿಗೆ ಶಿಬಿರ ಉದ್ಘಾಟಿಸಿ ಮಾತನಾಡಿ, ಶಾಲೆಗಳಲ್ಲಿ ಪಠ್ಯದ ಕ್ರಮ ಅನುಸರಿಸಿ ಶಿಕ್ಷಣ ನೀಡಲಾಗುತ್ತದೆ. ಇತರೆ ಚಟುವಟಿಕೆಗಳಿಗೆ ಅವಕಾಶವೇ ಇರುವುದಿಲ್ಲ ಎಂದು ಹೇಳಿದರು.

ಚಿಕ್ಕ ಮಕ್ಕಳಿಗೆ ಬೇಸಿಗೆ ಸಮಯದಲ್ಲಿ ಬೇಸಿಗೆ ಶಿಬಿರ ಏರ್ಪಡಿಸಿ ಮಕ್ಕಳಲ್ಲಿ ಇರುವ ಪ್ರತಿಭೆ ಹಾಗೂ ಚಟುವಟಿಕೆಗಳನ್ನು ಹೊಮ್ಮಿಸುವಲ್ಲಿ ಇಂತಹ ಶಿಬಿರಗಳೂ ಅತ್ಯವಶ್ಯ. ಹಿಂದಿನ ದಿನಗಳಲ್ಲಿ



ನಾವುಗಳು ಅಜ್ಜ, ಅಜ್ಜಿಗಳ ಊರುಗಳಿಗೆ ಹೋಗಿ ಪ್ರಕೃತಿಯೊಂದಿಗೆ ಬೆರೆತು ಆಟ ಆಡುತ್ತಿದ್ದೆವು.

ಆದರೆ, ಬದಲಾದ ದಿನಗಳಲ್ಲಿ ಸಂಬಂಧಗಳೇ ಮರೆತು ಹೋಗಿದ್ದು, ಮಕ್ಕಳಲ್ಲಿರುವ ನೈಪುಣ್ಯತೆಯನ್ನು ಆಟ ಪಾಠದ ಜೊತೆಗೆ ಹೊರ ತರುವ ಕೆಲಸವನ್ನು ಇಂತಹ ಶಿಬಿರಗಳು ಮಾಡಬೇಕಾಗಿದೆ ಎಂದು ಕಿವಿಮಾತು ಹೇಳಿದರು.

ಬೇಸಿಗೆ ರಜೆ ಬಂತೆಂದರೆ ಸಾಕು ಪೋಷಕರು ಮನೆಯಲ್ಲಿ ಮಕ್ಕಳನ್ನು ಇಟ್ಟುಕೊಂಡು ಯಾವುದೇ ಚಟುವಟಿಕೆಗಳನ್ನು ತೊಡಗಿಸುವುದಿಲ್ಲ. ಇದರಿಂದಾಗಿ ಮಕ್ಕಳಿಗೆ ಹೊರ ಜಗತ್ತಿನ ಸಂಪರ್ಕವೇ ಇಲ್ಲದಂತಾಗುತ್ತದೆ. ಇಂದು ಯುವಕರು ಯಾವ ಹಾದಿಯಲ್ಲಿ ಹೋಗುತ್ತಿದ್ದಾರೆಂದು ನಾವೆಲ್ಲಾ ಗಮನಿಸುತ್ತಿದ್ದೇವೆ. ತಂದೆ, ತಾಯಿ, ಪೋಷಕರ ಮಾತುಗಳನ್ನು ಕೇಳದೆ ಕೆಲವು ದುಶ್ಚಟಗಳಿಗೆ ದಾಸರಾಗಿ ಮಾನಸಿಕವಾಗಿ ಅಸ್ವಸ್ಥರಾಗುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಮಕ್ಕಳಲ್ಲಿ ಇಂತಹ ಬೇಸಿಗೆ ಶಿಬಿರಗಳು ಇಂತಹ ಕಾರ್ಯಗಳನ್ನು ಮಾಡಲು ಮುಂದಾಗಲಿ ಎಂದು ಕರೆ ನೀಡಿದರು.

ಹಿಮಾಲಯನ್ ಅಡ್ವೆಂಚರ್ ಅಂಡ್ ನೇಚರ್ ಅಕಾಡೆಮಿಯ ಪ್ರಧಾನ ಕಾರ್ಯದರ್ಶಿ ಎನ್.ಕೆ.ಕೊಟ್ರೇಶ್ ಮಾತನಾಡಿ, ಇಂದಿನ ದಿನಮಾನಗಳಲ್ಲಿ ಮಕ್ಕಳನ್ನು ಸುಮ್ಮನೆ ಮಾಡಲು ಪೋಷಕರೇ ಮಕ್ಕಳಿಗೆ ತಾವೇ ಮೊಬೈಲ್ ನೀಡುವ ಮೂಲಕ ಮಕ್ಕಳನ್ನು ಮೊಬೈಲ್ ದಾಸರನ್ನಾಗಿ ಮಾಡುತ್ತಿದ್ದಾರೆ. ಇದು ಅವರ ಮುಂದಿನ ಭವಿಷ್ಯಕ್ಕೆ ಕೊಡಲಿ ಪೆಟ್ಟು ಬಿದ್ದಂತೆ ಆಗುತ್ತದೆ. ಕಾರಣ ತಂದೆ ತಾಯಿಗಳು ತಮ್ಮ ಮಕ್ಕಳಿಗೆ ಚಿಕ್ಕಂದಿನಿಂದಲೇ ಸಂಬಂಧಗಳ ಬಗ್ಗೆ ತಿಳಿ ಹೇಳಬೇಕು. ಗುರು ಹಿರಿಯರನ್ನು ಗೌರವಿಸುವ, ಪೂಜಿಸುವ ಪರಿಪಾಠ ಕಲಿಸಬೇಕು. ಚಿಕ್ಕಂದಿನಲ್ಲೇ ಸಂಸ್ಕಾರ, ಸಂಸ್ಕೃತಿ ಹೇಳಿಕೊಡುವ, ಸಮಾಜದಲ್ಲಿ ಯಾವ ರೀತಿ ನಡೆದುಕೊಳ್ಳಬೇಕೆನ್ನುದನ್ನು ಹೇಳಿಕೊಡುವುದು ಅಗತ್ಯವಿದೆ. ಆ ನಿಟ್ಟಿನಲ್ಲಿ ಇಂದಿನ ಪೋಷಕರು ಮಕ್ಕಳಿಗೆ ನಮ್ಮ ದೇಶಿಯ ಸಂಸ್ಕಾರ ಹೇಳಿಕೊಡಬೇಕೆಂದರು.

ದಾವಣಗೆರೆ ಜಿಲ್ಲಾ ವರದಿಗಾರರ ಕೂಟದ ಪ್ರಧಾನ ಕಾರ್ಯದರ್ಶಿ ಎಂ.ವೈ.ಸತೀಶ್ ಮಾತನಾಡಿ, ಬೇಸಿಗೆ ಶಿಬಿರಗಳು ಹೆಸರಿಗಷ್ಟೇ ಸೀಮಿತ ಆಗದೇ ಮಕ್ಕಳ ಜ್ಞಾನವನ್ನು ಅರಿತುಕೊಂಡು ಅವರಿಗೆ ವಿವಿಧ ನೈಪುಣ್ಯತೆಗಳನ್ನು ತುಂಬುವ ಕೆಲಸ ಮಾಡುತ್ತಿವೆ. ಆ ಮೂಲಕ ಹೊರ ಜಗತ್ತಿನ ಸಂಪರ್ಕ ಮಾಡಿಸುತ್ತವೆ. ಒಟ್ಟಾರೆ ಬೇಸಿಗೆ ಶಿಬಿರಗಳು ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪೂರಕವಾಗಿವೆ ಎಂದು ಹೇಳಿದರು.

ಶಿಕ್ಷಾದೀಪ್ ವಿದ್ಯಾಸಂಸ್ಥೆಯ ಅಧ್ಯಕ್ಷೆ ಸವಿತಾ ಪ್ರಮೋದ್‌ಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಸಂಸ್ಥೆಯ ಕಾರ್ಯದರ್ಶಿ ಕೆ.ಎಸ್.ಮಂಜುಳಾ ವಿದ್ಯಾಸಂಸ್ಥೆ ನಡೆದು ಬಂದ ಹಾದಿಯ ಬಗ್ಗೆ ವಿವರಿಸಿದರು.

ಈ ವೇಳೆ ವಿದ್ಯಾಸಂಸ್ಥೆಯ ನಿರ್ದೇಶಕರಾದ ಕವಿತಾ ಸುರೇಶ್, ಪದ್ಮ ಸತೀಶ್, ಸಂಸ್ಥೆಯ ಪೋಷಕರಾದ ಸೋಮಶೇಖರ್‌ರಾಜ್, ಕೆಂಚಮ್ಮ, ಪಾರ್ವತಿ ತಿಪ್ಪೇರುದ್ರೇಶ್, ಮನೋಜ್ ಇದ್ದರು. ಶಿಬಿರಾರ್ಥಿಗಳಾದ ಗೋಪಿಕೃಷ್ಣ, ಸಿಂಧೂರ, ಕಾರ್ಯಕ್ರಮದ ನಿರ್ವಹಣೆ ಮಾಡಿದರು.

## ಫಾಸ್ಟ್ ನ್ಯೂಸ್

### ಏ. 10 ರಂದು ಭಗವಾನ್ ಮಹಾವೀರ ಜಯಂತಿ

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಚಿತ್ರದುರ್ಗ ಇವರ ಸಂಯುಕ್ತಾಶ್ರಯದಲ್ಲಿ ಭಗವಾನ್ ಮಹಾವೀರರ ಜಯಂತಿ ಆಚರಣೆ ಸಮಾರಂಭ ಏ. 10 ರಂದು ಬೆಳಿಗ್ಗೆ 11 ಗಂಟೆಗೆ ಜಿಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆಯಲಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ನೆರವೇರಿಸುವರು. ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅವರು ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ. ಕಾರಜೋಳ, ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ ಬಿ.ಜಿ. ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ. ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್.ವೈ. ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ. ಎಂ. ಚಂದ್ರಪ್ಪ, ವಿಧಾನಪರಿಷತ್ ಸದಸ್ಯರುಗಳಾದ ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಡಿ.ಟಿ. ಶ್ರೀನಿವಾಸ್ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ. ಬಿ. ಯೋಗೇಶ್ ಬಾಬು, ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ರಾಘವೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ಜೈನ್ ಸಂಘದ ಅಧ್ಯಕ್ಷ ವಸ್ತಿಮಲ್, ಕಾರ್ಯದರ್ಶಿ ಪ್ರೇಮಚಂದ್ ಸೇರಿದಂತೆ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು, ಚುನಾಯಿತ ನಗರಸಭಾ ಸದಸ್ಯರು, ಜಿಲ್ಲಾ ಜೈನ್ ಸಮಾಜದ ಮುಖಂಡರು, ಗಣ್ಯರು ಪಾಲ್ಗೊಳ್ಳುವರು. ಹರಿಯಬ್ಬೆ ಸರ್ಕಾರಿ ಪ.ಪೂ. ಕಾಲೇಜು ಉಪನ್ಯಾಸಕ ಟಿ. ತಿಪ್ಪೇಸ್ವಾಮಿ ಅವರು ವಿಶೇಷ ಉಪನ್ಯಾಸ ನೀಡುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಿ.ಎಂ. ಗುರುನಾಥ ತಿಳಿಸಿದ್ದಾರೆ.

### ಏ.8 ರಿಂದ 10 ರವರೆಗೆ ವಿದ್ಯುತ್ ವ್ಯತ್ಯಯ

» **ಚಿತ್ರದುರ್ಗ**

ಹಿರಿಯೂರು ಉಪ ವಿಭಾಗದ ವ್ಯಾಪ್ತಿಯ ಹಿರಿಯೂರು ಪಟ್ಟಣದಲ್ಲಿ ಇದೇ ಏಪ್ರಿಲ್ 8 ರಿಂದ 10 ರವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಹಿರಿಯೂರು ಪಟ್ಟಣದಲ್ಲಿ ಟಿ.ಬಿ ಸರ್ಕಲ್‌ನಿಂದ ಹುಳಿಯಾರ್ ರಸ್ತೆಯವರೆಗೆ ರಸ್ತೆ ಅಗಲೀಕರಣ ಕಾಮಗಾರಿ ಪ್ರಗತಿಯಲ್ಲಿರುವುದರಿಂದ ಹಿರಿಯೂರು 66/11 ಕೆ.ವಿ ವಿದ್ಯುತ್ ವಿತರಣಾ ಕೇಂದ್ರದ ಎಫ್-09 ಹುಳಿಯಾರ್ ರೋಡ್ ಮತ್ತು ಎಫ್-03 ಎನ್.ಜೆ.ವೈ ದೊಡ್ಡಘಟ್ಟ 11 ಕೆ.ವಿ ಮಾರ್ಗಗಳಿಗೆ ಇದೇ ಏಪ್ರಿಲ್ 8 ರಿಂದ 10 ರವರೆಗೆ ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಹಿರಿಯೂರು ಪಟ್ಟಣದ ಆವಧಾನಿನಗರ, ಗಾಂಧಿನಗರ, ತಾಲ್ಲೂಕು ಕಛೇರಿ, ಹುಳಿಯೂರು ರಸ್ತೆ ಲಕ್ಷ್ಮಮ್ಮಬಡಾವಣೆ, ಎಲ್‌ಐಸಿ ಬಡಾವಣೆ, ಹರಿಶ್ಚಂದ್ರ ಘಾಟ್, ಲಕ್ಕವ್ವನಹಳ್ಳಿ, ದೊಡ್ಡಘಡ್ಡ, ಸೀಗೇಹಳ್ಳಿ ಹಾಗೂ ಸುತ್ತ-ಮುತ್ತಲಿನ ಗ್ರಾಮದ ಗ್ರಾಹಕರು, ರೈತರು, ಸಾರ್ವಜನಿಕರು ಸಹಕರಿಸಬೇಕು ಎಂದು ಹಿರಿಯೂರು ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಕೋರಿದ್ದಾರೆ.

### ಸಮಾಲೋಚನಾ ಸಭೆ

» **ಚಿತ್ರದುರ್ಗ**

ಚಿತ್ರದುರ್ಗ ನಗರಸಭೆಯ ಕೌನ್ಸಿಲ್ ಸಭಾಂಗಣದಲ್ಲಿ ಇದೇ ಏಪ್ರಿಲ್ 08ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ನಗರಸಭೆಯ ಚುನಾಯಿತ ಜನ ಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಜೊತೆ ಸಮಾಲೋಚನಾ ಸಭೆ ಆಯೋಜಿಸಲಾಗಿದೆ. 5 ನ ’ ೀ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷರಾದ ಡಾ.ಸಿ.ನಾರಾಯಣಸ್ವಾಮಿ ಅವರು ಅಧ್ಯಕ್ಷತೆಯಲ್ಲಿ ಸಾಂಸ್ಥಿಕ ರಚನೆ ಕಾರ್ಯಚಟುವಟಿಕೆಗಳ ಆರ್ಥಿಕ ಸ್ಥಿತಿ, ಸಂಪನ್ಮೂಲಗಳ ಕ್ರೂಢೀಕರಣ, ಹಂಚಿಕೆ ಮತ್ತು ಮೂಲಸೌಕರ್ಯ ಹಾಗೂ ಸೇವೆಗಳ ಒದಗಿಸುವಿಕೆಯಲ್ಲಿ ತಾಂತ್ರಿಕ ಕೌಶಲ್ಯ ಸಾಮರ್ಥ್ಯ ಇತ್ಯಾದಿಗಳ ಅಧ್ಯಯನ ಕುರಿತು ಸಮಾಲೋಚನಾ ಸಭೆ ನಡೆಯಲಿದೆ.

### ಆಸ್ತಿ ತೆರಿಗೆ ಪಾವತಿ : ಶೇ.5ರಷ್ಟು ರಿಯಾಯಿತಿ

» **ಚಿತ್ರದುರ್ಗ**

ಚಿತ್ರದುರ್ಗ ನಗರಸಭೆ ಅಧ್ಯಕ್ಷರ ನೇತೃತ್ವದ ಕೌನ್ಸಿಲ್ ಸಭೆ 2025-26ನೇ ಸಾಲಿನ ಮೂಲ ಆಸ್ತಿ ತೆರಿಗೆ ಮೇಲೆ ವಾಸಯೋಗ್ಯ ಮತ್ತು ಖಾಲಿ ನಿವೇಶನಗಳಿಗೆ ಶೇ.3 ರಷ್ಟು ಹಾಗೂ ವಾಣಿಜ್ಯ ಮತ್ತು ಕೈಗಾರಿಕೆಗಳಿಗೆ ಶೇ.4 ರಷ್ಟು ಆಸ್ತಿ ತೆರಿಗೆಯನ್ನು ಹೆಚ್ಚಿಸಿ ಅನುಮೋದನೆ ನೀಡಿದೆ. ಈ ತೆರಿಗೆಯನ್ನು ಏಪ್ರಿಲ್ 1 ರಿಂದ ಜಾರಿ ಮಾಡಲಾಗಿದೆ. ನಗರಸಭೆ ವ್ಯಾಪ್ತಿಯಲ್ಲಿ ಆಸ್ತಿ ಹೊಂದಿರುವ ಸಾರ್ವಜನಿಕರು ಏಪ್ರಿಲ್ 30ರ ಒಳಗೆ ಆಸ್ತಿ ತೆರಿಗೆ ಪಾವತಿಸಿದರೆ, ಆಸ್ತಿ ತೆರಿಗೆ ಪಾವತಿ ಮೇಲೆ ಶೇ.5 ರಷ್ಟು ರಿಯಾಯಿತಿ ದೊರೆಯಲಿದೆ. ಈ ಅವಕಾಶವನ್ನು ಬಳಿಸಿಕೊಂಡು ಆಸ್ತಿ ತೆರಿಗೆ ಪಾವತಿಸಿ, ನಗರದ ಅಭಿವೃದ್ಧಿಗೆ ಸಹಕರಿಸುವಂತೆ ಸಾರ್ವಜನಿಕರಲ್ಲಿ ಪೌರಾಯುಕ್ತರು ಕೋರಿದ್ದಾರೆ.

### ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ. ಕೆ.ಟಿ.ತಿಪ್ಪೇಸ್ವಾಮಿ ಸೂಚನೆ

# ಮಕ್ಕಳ ರಕ್ಷಣೆ ಕುರಿತು ಜಾಗೃತಿ ಮೂಡಿಸಿ

» **ಚಿತ್ರದುರ್ಗ**





ಜಿಲ್ಲೆಯ ಪ್ರತಿ ಪೊಲೀಸ್ ಠಾಣೆಗಳಲ್ಲಿ ವರ್ಷಕ್ಕೆ ಕನಿಷ್ಠ 20 ತೆರೆದ ಮನೆ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ, ಮಕ್ಕಳ ರಕ್ಷಣಾ ನೀತಿ ಕುರಿತು ಮಕ್ಕಳಿಗೆ ಜಾಗೃತಿ ಮೂಡಿಸಬೇಕು. ಕಾನೂನು ಸಂಘರ್ಷಕ್ಕೆ ಒಳಗಾದ ಮಕ್ಕಳ ಜೊತೆ ಪೊಲೀಸ್ ಅಧಿಕಾರಿಗಳು ಸಂವೇದನಾಶೀಲರಾಗಿ ವರ್ತಿಸಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಸೂಚಿಸಿದರು.

ನಗರದ ಜಿಲ್ಲಾ ಶಿಕ್ಷಕರ ತರಬೇತಿ ಕೇಂದ್ರ (ಡಯಟ್) ಸಭಾಂಗಣದಲ್ಲಿ ಸೋಮವಾರ ಮಕ್ಕಳ ವಿಶೇಷ ಪೊಲೀಸ್ ಘಟಕದ ಕಾರ್ಯವೈಖರಿ ಕುರಿತು ಪೊಲೀಸ್ ಅಧಿಕಾರಿಗಳ ಸಭೆ ನಡೆಸಿ ಅವರು ಮಾತನಾಡಿದರು.

ಕಾನೂನು ಸಂಘರ್ಷಕ್ಕೆ ಸಿಲುಕಿದ ಮಕ್ಕಳ ಪೈಕಿ, ಹದಿ ಹರೆಯದವರು ಹೆಚ್ಚಿನ ಸಂಖ್ಯೆಯಲ್ಲಿ ಇರುವುದು ಕಳವಳಕಾರಿ ಸಂಗತಿಯಾಗಿದೆ. ಜಿಲ್ಲೆಯಾದ್ಯಂತ ಪ್ರೌಢಶಾಲೆಗಳಲ್ಲಿ ಮಾತ್ರ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಆದರೆ 18 ವರ್ಷದ ಒಳಗಿನವರೆಲ್ಲರೂ ಮಕ್ಕಳು ಎಂದೇ ಪರಿಗಣಿಸಲಾಗುತ್ತದೆ. 16 ರಿಂದ 18 ವರ್ಷದ ಮಕ್ಕಳಲ್ಲಿ ದೈಹಿಕ ಹಾಗೂ ಮಾನಸಿಕ ಬದಲಾವಣೆ ಉಂಟಾಗುತ್ತಿರುತ್ತವೆ. ಈ ಸಮಯದಲ್ಲಿ ಮಕ್ಕಳು ವಿಚಲಿತರಾಗಿ ಕಾನೂನು ಸಂಘರ್ಷಕ್ಕೆ ತುತ್ತಾಗುವ ಸಂಭವಿರುತ್ತದೆ. ಆದ್ದರಿಂದ ಪೊಲೀಸ್ ಇಲಾಖೆ ಅಧಿಕಾರಿಗಳು ವರ್ಷದಲ್ಲಿ ಒಮ್ಮೆಯಾದರು ಪಿಯುಸಿ, ಐ.ಟಿ.ಐ, ಪ್ಯಾರಾ ಮೆಡಿಕಲ್, ಡಿಪ್ಲೋಮೊ, ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ತಪ್ಪದೇ ಹಮ್ಮಿಕೊಳ್ಳಬೇಕು. ಈ ವೇಳೆ ಮಕ್ಕಳು ಗಂಭೀರವಾಗಿ ವಿಷಯಗಳನ್ನು ಗ್ರಹಿಸುವಂತೆ ನೈಜ ಪ್ರಕರಣಗಳ ಹೆಸರು, ಸ್ಥಳ ಬದಲಾಯಿಸಿ ಉದಾಹರಣೆ ಸಹಿತ ಮನಮುಟ್ಟುವಂತೆ ತಿಳಿಸಬೇಕು ಎಂದರು.ಪ್ರತಿ ಠಾಣೆಗಳಲ್ಲಿಯೂ ಮಕ್ಕಳ ವಿಶೇಷ ಪೊಲೀಸ್ ಘಟಕ ತೆರದು ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿಗಳನ್ನು ನೇಮಿಸಲಾಗಿದೆ. ಠಾಣೆಗಳಲ್ಲಿ ಮಕ್ಕಳ ರಕ್ಷಣೆಗೆ ಸಂಬಂಧಿಸಿದ ಇಲಾಖೆಗಳ ನಾಮಫಲಕಗಳನ್ನು ಅಳವಡಿಸಬೇಕು. ಪ್ರತಿ ಗುರುವಾರ ತೆರೆದ ಮನೆ ಕಾರ್ಯಕ್ರಮ ಆಯೋಜಿಸುವಂತೆ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಲಾಗಿದೆ. ಕೆಲಸದ ಒತ್ತಡ ನಡುವೆ ಪ್ರತಿ ವಾರ ಕಾರ್ಯಕ್ರಮ ಆಯೋಜಿಸಲು ಕಷ್ಟ ಸಾಧ್ಯ, ಆದರೆ ಪ್ರತಿ ಪೊಲೀಸ್ ಠಾಣೆಯಲ್ಲಿಯೂ ವರ್ಷಕ್ಕೆ ಕನಿಷ್ಠ 20 ತೆರೆದ ಮನೆ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಕೆ.ಟಿ. ತಿಪ್ಪೇಸ್ವಾಮಿ ಹೇಳಿದರು.

ಮೂರು ವರ್ಷದಲ್ಲಿ 300 ಕ್ಕೂ ಹೆಚ್ಚು ಪೋಕ್ಸೋ ಪ್ರಕರಣ : ಕಳೆದ ಮಾರ್ಚ್ 2023 ರಿಂದ 2025 ಮಾರ್ಚ್ ತಿಂಗಳ ಅಂತ್ಯದವರೆಗೆ ಜಿಲ್ಲೆಯ 19 ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 313 ಪೋಕ್ಸೋ ಪ್ರಕರಣಗಳು ದಾಖಲಾಗಿವೆ. ಇದರಲ್ಲಿ 05 ಪ್ರಕರಣಗಳು ಸುಳ್ಳು ಎಂದು ತಿಳಿದು ಬಂದಿವೆ. 13 ಪ್ರಕರಣಗಳು ಜಿಲ್ಲೆಯಿಂದ ವರ್ಗಾಯಿಸಲಾಗಿದೆ. 295 ಪ್ರಕರಣಗಳು ನೈಜವಿದ್ದು, 54 ಪ್ರಕರಣಗಳು ತನಿಖೆ ಹಂತದಲ್ಲಿವೆ. ಇವುಗಳ ಪೈಕಿ ಒಟ್ಟು 138 ಪ್ರಕರಣಗಳಲ್ಲಿ ಪೋಕ್ಸೋ ಕಾಯ್ದೆಯ ಜೊತೆಗೆ ಬಾಲ್ಯ ವಿವಾಹ ನಿಷೇಧ ಕಾಯ್ದೆಯನ್ನು ಒಳಗೊಂಡು ಪ್ರಕರಣಗಳನ್ನು ದಾಖಲಿಸಲಾಗಿದೆ. 207 ಪ್ರಕರಣಗಳು ನ್ಯಾಯಾಲಯದಲ್ಲಿ ವಿಚಾರಣೆ ಹಂತದಲ್ಲಿವೆ. 04 ಪ್ರಕರಣಗಳಲ್ಲಿ ಶಿಕ್ಷೆಯಾಗಿದೆ. 53 ಪ್ರಕರಣಗಳಲ್ಲಿ ಖುಲಾಸೆಯಾಗಿದ್ದು, 02 ಪ್ರಕರಣಗಳು ಪತ್ತೆಯಾಗಿಲ್ಲ. 02 ಪ್ರಕರಣದಲ್ಲಿ ಹೆಚ್ಚುವರಿ ದೋಷಾರೋಪಣ ಪಟ್ಟಿ ಸಲ್ಲಿಸಲಾಗಿದೆ. ಇದರ ಹೊರತಾಗಿ ಇದೇ ಅವಧಿಯಲ್ಲಿ ಬಾಲ್ಯ ವಿವಾಹ ನಿಷೇಧ ಕಾಯ್ದೆಯಡಿ 03 ಹಾಗೂ ಬಾಲ ಕಾರ್ಮಿಕ ನಿಷೇಧ ಕಾಯ್ದೆಯಡಿ 05 ಪ್ರಕರಣಗಳು ದಾಖಲಾಗಿವೆ ಎಂದು ಪೊಲೀಸ್ ಅಧಿಕಾರಿಗಳು ಸಭೆಯಲ್ಲಿ ಮಾಹಿತಿ ನೀಡಿದರು.

ಎಸ್‌ಜೆಪಿಯು ಘಟಕ ಕಾರ್ಯವೈಖರಿಗೆ ಮೆಚ್ಚುಗೆ: ಜಿಲ್ಲೆಯ ಮಕ್ಕಳ ವಿಶೇಷ ಪೊಲೀಸ್ ಘಟಕದ (ಎಸ್‌ಜೆಪಿಯು) ಅಧಿಕಾರಿಗಳ ಕಾರ್ಯವೈಖರಿಗೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಮೆಚ್ಚುಗೆ ವ್ಯಕ್ತಪಡಿಸಿದರು.ಚಿತ್ರದುರ್ಗ ಜಿಲ್ಲೆಯಲ್ಲಿ ಎಸ್‌ಜೆಪಿಯು ಘಟಕ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ. ತರಬೇತಿ ಹಾಗೂ ಅಧಿಕಾರಿಗಳ ಕ್ರಿಯಾಶೀಲತೆಯಿಂದಾಗಿ ಪರಿಣಾಮಕಾರಿಯಾಗಿ ಅನುಷ್ಠಾನ ಗೊಂಡಿದೆ ಎಂದು ಸಂತಸ ವ್ಯಕ್ತಪಡಿಸಿದರು.ಪೋಕ್ಸೋ ಕಾಯ್ದೆ ಸಮರ್ಪಕ ಅನುಷ್ಠಾನವಾಗಬೇಕು: ಜಿಲ್ಲೆಯ ಎಲ್ಲ ಶಾಲೆಗಳಲ್ಲಿಯೂ ಕಡ್ಡಾಯವಾಗಿ ಪೋಕ್ಸೋ ಕಾಯ್ದೆ ಅನುಷ್ಠಾನವಾಗಬೇಕು ಎಂದು ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

18 ವರ್ಷದೊಳಗಿನ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯಗಳು, ಕಿರುಕುಳ, ಅತ್ಯಾಚಾರ, ದುರ್ಘಟನೆಗಳನ್ನು ತಡೆಗಟ್ಟಲು ಹಾಗೂ ಮಕ್ಕಳ ರಕ್ಷಣೆ, ಭದ್ರತೆ ಒದಗಿಸುವ ಉದ್ದೇಶದಿಂದ ಪೋಕ್ಸೋ ಕಾಯ್ದೆ ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. “ಶಾಲೆಯಲ್ಲಿದೆ ಶಿಕ್ಷಣದ ಜೊತೆಗೆ ರಕ್ಷಣೆ” ಎಂಬ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಸುರಕ್ಷಿತ ಹಾಗೂ ಅಸುರಕ್ಷಿತ ಸ್ಪರ್ಶ ಕುರಿತು ಮಕ್ಕಳಲ್ಲಿ ಜಾಗೃತಿ ಮೂಡಿಸಬೇಕು ಎಂದು ಸಲಹೆ ನೀಡಿದರು.

ಬಾಲ್ಯವಿವಾಹ ಹಾಗೂ ಬಾಲಕಾರ್ಮಿಕ ಪದ್ಧತಿ ಕುರಿತು ಸಮುದಾಯದಲ್ಲಿ ಹೆಚ್ಚಿನ ಜಾಗೃತಿ ಮೂಡಿಸಬೇಕು. ಬಾಲ್ಯ ವಿವಾಹ ತಡೆಯುವ ನಿಟ್ಟಿನಲ್ಲಿ ಸಮುದಾಯದಲ್ಲಿ ಹೆಚ್ಚಿನ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.ಜಿಲ್ಲೆಯ ಮೊಳಕಾಲ್ಮೂರು ತಾಲ್ಲೂಕು ವ್ಯಾಪ್ತಿಯಲ್ಲಿ ಬಾಲಕಾರ್ಮಿಕ ಪ್ರಕರಣಗಳು ಜಾಸ್ತಿ ಇವೆ ಎಂದು ಸಾಕಷ್ಟು ದೂರುಗಳು ಬರುತ್ತಿವೆ, ಈ ಕುರಿತು ಗಮನಹರಿಸಬೇಕು. ತಹಶೀಲ್ದಾರ್ ನೇತೃತ್ವದಲ್ಲಿ ರಚಿಸಲಾಗಿರುವ ತಾಲ್ಲೂಕು ಟಾಸ್ಕ್ ಪೋರ್ಸ್ ಸಮಿತಿ ವತಿಯಿಂದ ನಿಯಮಿತವಾಗಿ ತಪಾಸಣೆ ಮಾಡಿ, ಬಾಲಕಾರ್ಮಿಕರ ಪತ್ತೆ ಹಚ್ಚಬೇಕು ಎಂದು ತಿಳಿಸಿದರು.ಸಭೆಯಲ್ಲಿ ಚಿತ್ರದುರ್ಗ ಉಪವಿಭಾಗದ ಪೊಲೀಸ್ ಉಪಾಧೀಕ್ಷಕರು ಹಾಗೂ ಹಿರಿಯ ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿ ಪಿ.ಕೆ.ದಿನಕರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ. ಸವಿತಾ ಸೇರಿದಂತೆ ಮಕ್ಕಳ ವಿಶೇಷ ಪೊಲೀಸ್ ಘಟಕದ ಅಧಿಕಾರಿಗಳು ಇದ್ದರು.

# ಅಂಬೇಡ್ಕರ್-ಬುದ್ಧ ಮತ್ತು ಆತನ ಧಮ್ಮ, ಸಂವಿಧಾನ ಕುರಿತ ವಿಚಾರ ಸಂಕಿರಣ

» **ಚಿತ್ರದುರ್ಗ**




ನವಯಾನ ಬುದ್ಧ ಧಮ್ಮವನ್ನು ಜನರ ಬಳಿಗೆ ತೆಗೆದುಕೊಂಡು ಹೋಗಬೇಕಿದೆ ಎಂದು ನವಯಾನ ಚಿಂತಕ ಹಿರೇಹಳ್ಳಿ ಮಲ್ಲಿಕಾರ್ಜುನ್ ತಿಳಿಸಿದರು.

ನವಯಾನ ಬುದ್ಧ ಧಮ್ಮ ಸಂಘ, ನವಯಾನ ಧಮ್ಮ ಸಾಹಿತ್ಯ ದ್ವಿತೀಯ ಸಂಗಾಯನ ವತಿಯಿಂದ ಆದಿ ಕರ್ನಾಟಕ ಹಾಸ್ಟೆಲ್ ಜಾಗದಲ್ಲಿ ಏರ್ಪಡಿಸಲಾಗಿದ್ದ ಅಂಬೇಡ್ಕರ್-ಬುದ್ಧ ಮತ್ತು ಆತನ ಧಮ್ಮ ಹಾಗೂ ಸಂವಿಧಾನ ಕುರಿತ ವಿಚಾರ ಸಂಕಿರಣ ಉದ್ದೇಶಿಸಿ ಮಾತನಾಡಿದರು.

ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಹಿಂದೂ ಧರ್ಮದಲ್ಲಿ ಹುಟ್ಟಿ ಹಿಂಧೂ ಧರ್ಮದಲ್ಲಿ ಸಾಯಲಾರೆ ಎಂದು ಬೌದ್ಧ ಧರ್ಮಕ್ಕೆ ಸೇರಿ ಬುದ್ಧ ಧಮ್ಮ ಪರಿಷ್ಕರಣೆಗೊಳಿಸಿ ನವಯಾನ ಬುದ್ಧ ಧಮ್ಮ ಎಂದು ಮಾರ್ಪಡಿಸಿದರು. ಬುದ್ಧ, ಬಸವ ಹೂಡಿಕೆಯಿಂದ ಹುಟ್ಟುವ ಧಮ್ಮ ನನಗೆ ಪ್ರಿಯವಾದುದು ಎಂದು ಅಂಬೇಡ್ಕರ್ ಹೇಳಿದ್ದಾರೆ. ಬುದ್ಧನ ಬಗ್ಗೆ ಇಲ್ಲ ಸಲ್ಲದ ಅಸತ್ಯವನ್ನು ಹೇಳುತ್ತ ನಮ್ಮ ಜನಾಂಗದ ಯುವಕರನ್ನು ದಾರಿತಪ್ಪಿಸುವುದಿದೆಯಲ್ಲಾ ಚಳುವಳಿಗೆ ಆದ ಬಹುದೊಡ್ಡ ಅವಮಾನ. ನವಯಾನ ಬುದ್ಧ ಧಮ್ಮವನ್ನು ಚಳುವಳಿಯಾಗಿ ತೆಗೆದುಕೊಂಡು ಹೋದಾಗ ಶಾಶ್ವತವಾಗಿ ಉಳಿಯುತ್ತದೆ ಎಂದರು. ಹಿಂದೂ ಧರ್ಮದಲ್ಲಿ ಇಂದಿಗೂ ನಮ್ಮನ್ನು ಒಪ್ಪಿಕೊಳ್ಳುತ್ತಿಲ್ಲ. ಅಸ್ಪೃಶ್ಯರನ್ನಾಗಿಯೇ ಕಾಣಲಾಗುತ್ತಿದೆ. ದೇಶದಲ್ಲಿ ನಡೆಯುತ್ತಿರುವ ರಾಜಕೀಯ, ಆರ್ಥಿಕ, ಸಾಮಾಜಿಕ

ಸಾಂಸ್ಕೃತಿಕ, ಧಾರ್ಮಿಕ ಬೆಳವಣಿಗೆಗಳು ಶೋಷಿತರು, ದಲಿತರ ವಿರುದ್ಧವಾಗಿದೆ. ಮಾದಿಗರು ಸೇರಿದಂತೆ ಈ ದೇಶದ ಮೂಲ ನಿವಾಸಿಗಳು ಹಿಂದೂಗಳಲ್ಲ. ಗಾಯತ್ರಿ, ಗೀತೆ, ಗೋವು, ಇವುಗಳನ್ನು ಪವಿತ್ರವೆಂದು ಒಪ್ಪಿಕೊಳ್ಳುವುದಿಲ್ಲ. ತಮ್ಮ ಜನನ-ಮರಣ, ಮುಂಜಿ, ಮದುವೆ ಕಾರ್ಯಕ್ರಮಗಳಲ್ಲಿ ಬ್ರಾಹ್ಮಣ್ಯರ ಮಧ್ಯಸ್ಥಿಕೆಯಿರುವುದಿಲ್ಲ. ಹಿಂದೂಗಳೆಂದು ಘೋಷಿಸಿಕೊಂಡವರು ಸಹ ನಮ್ಮನ್ನು ಹಿಂದೂಗಳೆಂದು ಒಪ್ಪಿಕೊಳ್ಳುವುದಿಲ್ಲವೆಂದು ನುಡಿದರು. ಸರ್ಕಾರಿ ಕಲಾ ಕಾಲೇಜು ಪ್ರಾಂಶುಪಾಲರಾದ ಬಿ.ಟಿ.ತಿಪ್ಪೇರುದ್ರಪ್ಪ ಮಾತನಾಡಿ ಬುದ್ಧನ ಸಂದೇಶಗಳನ್ನು ಪ್ರತಿಯೊಬ್ಬರು ಅರ್ಥಮಾಡಿಕೊಳ್ಳಬೇಕು. ಹಿಂದೂ ಸಮಾಜದಲ್ಲಿ ಈಗಲು ನಮ್ಮನ್ನು ಒಪ್ಪಿಕೊಳ್ಳುತ್ತಿಲ್ಲ. ಶೋಷಣೆ, ಅಸ್ಪೃಶ್ಯತೆ ನಿಂತಿಲ್ಲ. ಡಾ.ಬಿ.ಆರ್.ಅಂಬೇಡ್ಕರ್ ಹೇಳಿರುವಂತೆ ಶಿಕ್ಷಣ, ಸಂಘಟನೆ, ಹೋರಾಟದಿಂದ ಮಾತ್ರ ಜೀವನದಲ್ಲಿ ಬದಲಾವಣೆ ಕಂಡುಕೊಳ್ಳಲು ಸಾಧ್ಯ ಎಂದರು.

ಡಿ.ಎನ್.ಮೈಲಾರಪ್ಪ ಮಾತನಾಡುತ್ತ ಪ್ರೊ.ಬಿ.ಕೃಷ್ಣಪ್ಪನವರು ದಲಿತ ಜನಾಂಗಕ್ಕೆ ಚಳುವಳಿ ಮೂಲಕ ಶಕ್ತಿ ತುಂಬಿದರು. ವಿದ್ಯಾರ್ಥಿ ದೆಸೆಯಿಂದಲೂ ನಾನು ಚಳುವಳಿ ಮೂಲಕ ಸಂಘಟನೆಯಲ್ಲಿ ಗುರುತಿಸಿಕೊಂಡವನು. ದಲಿತ ಸಂಘಟನೆಗಳು ಛಿದ್ರವಾಗಿರುವುದರಿಂದ ಬಲ ಕಳೆದುಕೊಂಡಂತಾಗಿದೆ. ಹೋರಾಟವಿಲ್ಲದಿದ್ದರೆ ನ್ಯಾಯಯುತವಾದ ಹಕ್ಕನ್ನು ಪಡೆಯುವುದು ಕಷ್ಟ. ಒಳ ಮೀಸಲಾತಿ ಜಾರಿಯಾಗಬೇಕು. ಶಿಕ್ಷಣದಿಂದ ಮಾತ್ರ ಸರ್ಕಾರದಿಂದ ದೊರಯುವ ಸೌಲಭ್ಯಗಳನ್ನು ಪಡೆದುಕೊಳ್ಳಬಹುದೆಂದು ಹೇಳಿದರು.ದಲಿತ ಸಂಘರ್ಷ ಸಮಿತಿಯ ಹಿರಿಯ ಹೋರಾಟಗಾರ ಡಿ.ದುರುಗೇಶಪ್ಪ, ಪರಿವರ್ತನಾ ಚಿಂತಕ ಸಿ.ಕೆ.ಮಹೇಶ್, ನವಯಾನ ಧಮ್ಮ ಚಿಂತಕ ಟಿ.ರಾಮು, ಕೆ.ಕುಮಾರ್‌ಲೇಖಕ ಹೆಚ್.ಆನಂದಕುಮಾರ್, ಡಾ.ವಿ.ಬಸವರಾಜ್, ಸಿ.ಎ.ಚಿಕ್ಕಣ್ಣ, ವಿಶ್ರಾಂತ ಡೀನ್ ಪ್ರೊ.ಹೆಚ್.ಶಿವಣ್ಣ ಇನ್ನು ಅನೇಕರು ವಿಚಾರ ಸಂಕಿರಣದಲ್ಲಿ ಪಾಲ್ಗೊಂಡಿದ್ದರು.

## ಮೈಲನಹಳ್ಳಿ : ಶ್ರೀಈಶ್ವರದೇವಸ್ಥಾನದ ಕಳಸಾರೋಹಣ ಕಾರ್ಯಕ್ರಮ



» **ಚಳ್ಳಕೆರೆ**

ಸಮಾಜದಲ್ಲಿ ಪ್ರತಿಯೊಬ್ಬ ವ್ಯಕ್ತಿಯೂ ಉತ್ತಮ ಬದುಕು ರೂಪಿಸಿಕೊಳ್ಳಲು ಪ್ರೇರಣೆ ನೀಡಿದವರು ಜಗಜ್ಯೋತಿಬಸವಣ್ಣನವರು. 12ನೇ ಶತಮಾನ ಧಾರ್ಮಿಕ ಬದಲಾವಣೆಯ ವರ್ಷವಾಗಿ ಪರಿವರ್ತನೆಯಾಯಿತು. ಸಮಾಜದಲ್ಲಿ ಒಳ್ಳೆಯ ವಿಚಾರಗಳನ್ನು ಕೇಳುವಂತಹ ಸ್ಥಿತಿ ನಿರ್ಮಾಣವಾಯಿತು. ಇಂದು ನಾವೆಲ್ಲರೂ ಧಾರ್ಮಿಕ ಪರಂಪರೆಯನ್ನು ಮುಂದುವರೆಸಿಕೊಂಡು ಬಂದಿದ್ದೇವೆಂದರೆ ಅದಕ್ಕೆ ಜಗಜ್ಯೋತಿಬಸವಣ್ಣನವರೇ ಸ್ಪೂರ್ತಿ ಎಂದು ಉಜ್ಜಯನಿ ಸದ್ಧರ್ಮ ಸಿಂಹಾಸನಾಧೀಶ್ವರ ಸಿದ್ಧಲಿಂಗರಾಜದೇಶೀಕೇಂದ್ರ ಶಿವಾಚಾರ್ಯಭಗವತ್ಪಾದಮಹಾಸ್ವಾಮಿಜಿ ತಿಳಿಸಿದರು. ಅವರು, ಸೋಮವಾರ ತಳಕು ಹೋಬಳಿಯ ಮೈಲನಹಳ್ಳಿ ಗ್ರಾಮದಲ್ಲಿ ಭಕ್ತರು ಹಮ್ಮಿಕೊಂಡಿದ್ದ ಶ್ರೀಈಶ್ವರದೇವಸ್ಥಾನದ ಕಳಸಾರೋಹಣ, ನೂತನ ಕರಿಗಲ್ಲು ಸ್ಥಾಪನೆ ಹಾಗೂ ಸ್ವಾಮಿಯವರ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮತ್ತು ಜನಜಾಗೃತಿ ಧರ್ಮಸಮಾರಂಭ ಪಾಲ್ಗೊಂಡು ಮಾತನಾಡಿದರು. ಗ್ರಾಮೀಣ ಭಾಗಗಳಲ್ಲಿ ಜನರು ಭಕ್ತಿ, ಶ್ರದ್ದೆಗೆ ಹೆಚ್ಚು ಆದ್ಯತೆ ನೀಡುತ್ತಾರೆ. ಇಂದು ಸಾವಿರಾರು ಭಕ್ತರು ವಿವಿಧ ಗ್ರಾಮಗಳಿಂದ ಆಗಮಿಸಿ ದೇವರ ದರ್ಶನ ಪಡೆದಿದ್ದಾರೆ. ನಮ್ಮೆಲ್ಲಾ ಧಾರ್ಮಿಕ ಜಾಗೃತಿ ಕಾರ್ಯಕ್ರಮಗಳಿಗೆ ಇಂತಹ ಕಾರ್ಯಕ್ರಮಗಳು ಪ್ರೇರಣೆಯಾಗಲಿವೆ ಎಂದರು.

ಮುಸ್ಟೂರಿನ ದಾಸೋಹ ಮಠದ ರುದ್ರಮುನಿಶಿವಾಚಾರ್ಯಸ್ವಾಮೀಜಿ ಮಾತನಾಡಿ, ಧಾರ್ಮಿಕ ವಿಚಾರಧಾರೆಗಳಿಂದ ಮನುಷ್ಯನ ಪರಿವರ್ತನೆಯೊಂದಿಗೆ ಸಮಾಜದ ಪರಿವರ್ತನೆಯೂ ಸಹ ಸುಲಭವಾಗುತ್ತದೆ. ಸಾಮಾನ್ಯವಾಗಿ ಎಂತಹ ಸಂದರ್ಭದಲ್ಲೂ ಸಹ ವ್ಯಕ್ತಿ ಧರ್ಮವನ್ನು ಬಿಡಲು ಒಪ್ಪುವುದಿಲ್ಲ. ತನ್ನದೇಯಾದ ರೀತಿಯಲ್ಲಿ ಧಾರ್ಮಿಕ ವಿಚಾರಗಳನ್ನು ತಿಳಿದು ಅದರಂತೆ ನಡೆಯುವ ಪ್ರಾಮಾಣಿಕ ಪ್ರಯತ್ನ ಮಾಡುತ್ತಾನೆ. ಇದೊಂದು ಸಮಧಾನಕರ ಬೆಳವಣಿಗೆ ಎಂದರು.

## ಪ್ರಮುಖ ಸುದ್ದಿ

# ಕನಗೊಂಡನಹಳ್ಳಿಗೆ 24/7 ನೀರು ಪೂರೈಕೆ: ಪ್ರಭಾ ಮಲ್ಲಿಕಾರ್ಜುನ್

» **ದಾವಣಗೆರೆ**



ಶುದ್ಧ ಕುಡಿಯುವ ನೀರು ಪೂರೈಕೆಯಿಂದ ನೀರಿನಿಂದ ಬರುವ ಅನೇಕ ಸಾಂಕ್ರಮಿಕ ರೋಗಗಳನ್ನು ತಡೆಗಟ್ಟಬಹುದಾಗಿದೆ. ಈ ನಿಟ್ಟಿನಲ್ಲಿ 24*7 ಕುಡಿಯುವ ನೀರು ಪೂರೈಕೆಯ ಗ್ರಾಮವನ್ನಾಗಿ ಕನಗೊಂಡನಹಳ್ಳಿ ಜಿಲ್ಲೆಯ ಎರಡನೇ ಗ್ರಾಮವಾಗಿದೆ ಎಂದು ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಸೋಮವಾರ ದಾವಣಗೆರೆ ತಾಲ್ಲೂಕಿನ ಕನಗೊಂಡನಹಳ್ಳಿ ಗ್ರಾಮದಲ್ಲಿ ಜಿಲ್ಲಾ ಪಂಚಾಯತ್, ಗ್ರಾಮೀಣ ನೀರು, ನೈರ್ಮಲ್ಯ ವಿಭಾಗ, ಜಲಜೀವನ್ ಮಿಷನ್, ಕರ್ನಾಟಕ ಸುಸ್ಥಿರ ಕುಡಿಯುವ ನೀರು ಸರಬರಾಜು ಯೋಜನೆ ಹಾಗೂ ಕಾರ್ಯಾಚರಣೆ ನಿರ್ವಹಣೆ ಸಾಂಸ್ಥೀಕರಣದ ಬಲವರ್ಧನೆ ಅಂಗವಾಗಿ 24*7 ಕುಡಿಯುವ ನೀರು ಪೂರೈಕೆ ಯೋಜನೆಗೆ ಚಾಲನೆ ನೀಡಿ ಸಮಾರಂಭದಲ್ಲಿ ಮಾತನಾಡಿದರು.

ನಿರಂತರ ಕುಡಿಯುವ ನೀರಿನ ಯೋಜನೆಯಿಂದ ಮಹಿಳೆಯರಿಗೆ ಸಾಕಷ್ಟು ಅನುಕೂಲವಾಗುವ ಜೊತೆಗೆ ಶುದ್ಧತೆಯಿಂದ ಹಲವು ರೋಗಗಳನ್ನು ತಡೆಗಟ್ಟಬಹುದಾಗಿದೆ. ದಿನದ 24 ಗಂಟೆಗಳ ಕಾಲವೂ ನೀರು ಲಭ್ಯವಾಗುವುದರಿಂದ ಇದನ್ನು ಮಿತಬಳಕೆ ಮಾಡಿ ವ್ಯರ್ಥವಾಗಿ ಹೋಗುವ ನೀರನ್ನು ತಡೆಗಟ್ಟಬೇಕು. ಪಂಚಾಯಿತಿ ಹಾಗೂ ಗ್ರಾಮ ನೀರು, ನೈರ್ಮಲ್ಯ ಸಮಿತಿಯಿಂದ ಕಾಲಕಾಲಕ್ಕೆ ನೀರಿನ ಪರೀಕ್ಷೆ ನಡೆಸುವ ಮೂಲಕ ನೀರು ಪೂರೈಕೆ ಮಾಡಲಾಗುತ್ತದೆ. ಆದ್ದರಿಂದ ಯಾರು ಸಹ ಮನೆಯಲ್ಲಿ ಹೆಚ್ಚಿನ ನೀರು ಸಂಗ್ರಹಣೆ ಮಾಡಿಕೊಂಡು ವ್ಯರ್ಥ ಮಾಡಬಾರದು. ನೀರು ಸಂಗ್ರಹ ಮಾಡಿಕೊಳ್ಳುವುದರಿಂದ ಡೆಂಗ್ಯೂ ಸೇರಿದಂತೆ ಇತರೆ ಕಾಯಿಲೆಗಳಿಗೂ ಕಾರಣವಾಗಬಹುದೆಂದು ಗ್ರಾಮಸ್ಥರಿಗೆ ತಿಳಿಸಿದರು. ಜಿಲ್ಲೆಯಲ್ಲಿನ 100 ಗ್ರಾಮಗಳಲ್ಲಿ 24*7 ನಿರಂತರ ಕುಡಿಯುವ ನೀರು ಪೂರೈಕೆ ಮಾಡಲು ಗುರಿ ಹೊಂದಲಾಗಿದ್ದು ಬರುವ ಆಗಸ್ಟ್ ಒಳಗಾಗಿ ಈ ಎಲ್ಲಾ ಗ್ರಾಮಗಳಿಗೂ ನಿರಂತರ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತದೆ. ಈಗಾಗಲೇ ನ್ಯಾಮತಿ ತಾಲ್ಲೂಕಿನ ದಾನಿಹಳ್ಳಿ ಗ್ರಾಮ ಮೊದಲಾಗಿದ್ದು ಕನಗೊಂಡನಹಳ್ಳಿ ಜಿಲ್ಲೆಯ ಎರಡನೇ ಗ್ರಾಮವಾಗಿದ್ದು ಇದು ರಾಜ್ಯದಲ್ಲಿ 15 ನೇ ಗ್ರಾಮವಾಗಿದೆ ಎಂದರು. ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ಇವರು ಮಾತನಾಡಿ ನೀರು ಮಿತವಾದ ಸಂಪತ್ತು, ನಮ್ಮ ಸ್ವಂತ ವಾಹನವನ್ನು ಅಚ್ಚುಕಟ್ಟಾಗಿ ಇಟ್ಟುಕೊಳ್ಳುವ ನೀತಿಯಲ್ಲಿ ಮನೆಯ ಮುಂದಿನ ಜಾಗವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ನಲ್ಲಿ ಮುರಿದುಹೋದಲ್ಲಿ ಆಯಾ ಮನೆಯವರೇ ಖರೀದಿಸಿ ಅಳವಡಿಸಿಕೊಂಡು ನೀರು ವ್ಯರ್ಥವಾಗಿ ಹರಿಯದಂತೆ ಕಾಪಾಡಿಕೊಳ್ಳುವ ಜವಾಬ್ದಾರಿ ನಿಮ್ಮದಾಗಿದೆ. ಬಾಟಲಿ ನೀರನ್ನು ಹೆಚ್ಚು ಉಪಯೋಗಿಸದೇ ನಿಮ್ಮ ಮನೆಗೆ ಪೂರೈಕೆ ಮಾಡುವ ಶುದ್ಧ ಕುಡಿಯುವ ನೀರನ್ನೇ ಬಳಕೆ ಮಾಡಿರಿ, ಇದರಲ್ಲಿ ಹೆಚ್ಚು ಮಿನರಲ್‌ಗಳಿರುತ್ತವೆ ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಮಾತನಾಡಿ ಕನಗೊಂಡನಹಳ್ಳಿ ಗ್ರಾಮದಲ್ಲಿ 340 ನಲ್ಲಿಗಳನ್ನು ಅಳವಡಿಸಲಾಗಿದೆ. ಇದಕ್ಕಾಗಿ ರೂ.97 ಲಕ್ಷ ವೆಚ್ಚ ಮಾಡಲಾಗಿದೆ. ಇಲ್ಲಿನ ನೀರನ್ನು 13 ವಿವಿಧ ಮಾದರಿಯಲ್ಲಿ ಆಗಿಂದಾಗ್ಗೆ ನೀರಿನ ಪರೀಕ್ಷೆ ಮಾಡಿ ಸರಬರಾಜು ಮಾಡಲಾಗುತ್ತದೆ.

## ಫಾಸ್ಟ್ ನ್ಯೂಸ್

### ವಾಲಿಬಾಲ್ ತರಬೇತಿ

» ದಾವಣಗೆರೆ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸಿಟಿ ಸ್ಟಾರ್ ವಾಲಿಬಾಲ್ ಕ್ಲಬ್, ಫ್ರೆಂಡ್ಸ್ ಸ್ಪೋರ್ಟ್ಸ್ ಕ್ಲಬ್ ಹಾಗೂ ಗೋಲ್ಡನ್ ಈಗಲ್ ಕ್ಲಬ್ ಇವರ ಸಂಯುಕ್ತಾಶ್ರಯದಲ್ಲಿ ಏಪ್ರಿಲ್ 25 ರವರೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಬೇಸಿಗೆ ವಾಲಿಬಾಲ್ ತರಬೇತಿ ಶಿಬಿರವನ್ನು ಬೆಳಿಗ್ಗೆ 5 ರಿಂದ 7 ಗಂಟೆಯವರೆಗೆ ಹಾಗೂ ಸಂಜೆ 5 ರಿಂದ 6.30 ರವರೆಗೆ ಆಯೋಜಿಸಲಾಗಿದೆ. ಶಾಲಾ ಕಾಲೇಜು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಬೇಸಿಗೆ ವಾಲಿಬಾಲ್‌ತರಬೇತಿಶಿಬಿರದಸದುಪಯೋಗವನ್ನು ಪಡೆದುಕೊಳ್ಳಬಹುದು. ಹೆಚ್ಚಿನ ವಿವರಗಳಿಗೆ ಇಲಾಖೆಯ ತರಬೇತುದಾರರಾದ ಎಂ.ಎಸ್. ಜಮಾ ಅಹಮ್ಮದ್–ಮೊ.ನಂ: 9141091590, ದರ್ಶನ್ ಮೊ.ನಂ: 8147842647 ಇವರನ್ನು ಸಂಪರ್ಕಿಸಲು ಇಲಾಖೆಯ ಸಹಾಯಕ ನಿರ್ದೇಶಕರಾದ ರೇಣುಕಾದೇವಿ ತಿಳಿಸಿದ್ದಾರೆ.

### ಬೇಸಿಗೆ ಕಬಡಿ ತರಬೇತಿ

» ದಾವಣಗೆರೆ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸೃಷ್ಟಿ ಕಬಡಿ ಅಕಾಡೆಮಿ(ರಿ), ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಬೇಸಿಗೆ ಕಬಡ್ಡಿ ತರಬೇತಿ ಶಿಬಿರವನ್ನು ದಾವಣಗೆರೆ ಜಿಲ್ಲಾ ಕ್ರೀಡಾಂಗಣದಲ್ಲಿ ಏಪ್ರಿಲ್ 10 ರಿಂದ 30 ರವರೆಗೆ ಬೆಳಿಗ್ಗೆ 6.30 ರಿಂದ 8 ಗಂಟೆಯ ವರೆಗೆ ಹಾಗೂ ಸಾಯಂಕಾಲ ಸಂಜೆ 5 ರಿಂದ 6.30 ರ ವರೆಗೆ ಆಯೋಜಿಸಲಾಗಿದೆ. ಆಸಕ್ತ ಶಾಲಾ ಕಾಲೇಜು ವಿದ್ಯಾರ್ಥಿ ವಿದ್ಯಾರ್ಥಿನಿಯರು ಬೇಸಿಗೆ ಕಬಡ್ಡಿ ತರಬೇತಿ ಶಿಬಿರದ ಸದುಪಯೋಗವನ್ನು ಪಡೆದುಕೊಳ್ಳಬಹುದು. ಹೆಚ್ಚಿನ ವಿವರಗಳಿಗೆ ಇಲಾಖೆಯ ತರಬೇತುದಾರರಾದ ಶ್ರೀಶೈಲ ಎಸ್– ಮೊ.ನಂ: 9448667255 ಹಾಗೂ ನೂರುಲ್ಲ ಮೊ.ನಂ: 9740107364, ಶಿವಯೋಗಿ ಮೊ.ನಂ: 9019619900, ರಾಕೇಶ್ ಮೊನಂ:9448835907 ಇವರನ್ನು ಸಂಪರ್ಕಿಸಿ.

### ಪ್ರದೀಪ್‌ಗೆ ಪಿಎಚ್‌ಡಿ

» ಚಿತ್ರದುರ್ಗ



ತಾಲ್ಲೂಕಿನ ಮೆದೆಹಳ್ಳಿ ಗ್ರಾಮದ ನಿವಾಸಿಗಳಾದ ಅನ್ನಪೂರ್ಣಮ್ಮ ಮತ್ತು ಶಂಕರಪ್ಪ ದಂಪತಿಗಳ ಪುತ್ರ ಪ್ರದೀಪ್ ಎಸ್. ಇವರಿಗೆ ಹಂಪಿ ಕನ್ನಡ ವಿಶ್ವವಿದ್ಯಾನಿಲಯದ 33 ನೇ ಘಟಿಕೋತ್ಸವದಲ್ಲಿ ಪಿ.ಹೆಚ್.ಡಿ. ಪದವಿ ನೀಡಿ ಗೌರವಿಸಲಾಗಿದೆ.ಶಿವರಾಮ ಕಾರಂತ ಮತ್ತು ಮುಲ್ಕರಾಜ್ ಆನಂದರವರ ಆಯ್ದ ಕಾದಂಬರಿಗಳಲ್ಲಿ ಸಾಮಾಜಿಕ ವಾಸ್ತವಿಕತೆಯ ತುಲನಾತ್ಮಕ ಅಧ್ಯಯನ ಎಂಬ ಮಹಾ ಪ್ರಬಂಧಕ್ಕೆ ಪ್ರದೀಪ್ ಎಸ್. ಇವರಿಗೆ ಪಿ.ಹೆಚ್.ಡಿ. ಪದವಿ ಲಭಿಸಿದೆ.ಧಾರವಾಡ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಕೇಂದ್ರ ಇಂಗ್ಲಿಷ್ ವಿಭಾಗದಮುಖ್ಯಸ್ಥರಾದಪ್ರೊ.ಗುರುನಾಥ್ ಕೆ.ಬಡಿಗೇರ್‌ರವರ ಮಾರ್ಗದರ್ಶದನದಲ್ಲಿ ಮಹಾ ಪ್ರಬಂಧ ಮಂಡಿಸಿದ್ದರು.

### ಗ್ರಾಮ ಸಭೆ

» ಚಿತ್ರದುರ್ಗ

ಹೊಳಲ್ಕೆರೆ ತಾಲೂಕಿನ ಗಣಿಭಾದಿತ ಪ್ರದೇಶದ ಹಳ್ಳಿಗಳ 5 ಕಿ.ಮೀ. ವ್ಯಾಪ್ತಿಗೆ ಸೇರುವ ಅರ್ಹ ವಸತಿ ಹಾಗೂ ನಿವೇಶನ ರಹಿತರನ್ನು ಆಯ್ಕೆ ಮಾಡಿ, ಪಟ್ಟಿ ಸಲ್ಲಿಸಲು ಜಿ.ಪಂ.ಸಿಇಒ ಎಸ್.ಜೆ.ಸೋಮಶೇಖರ್ ಸೂಚಿಸಿದ್ದಾರೆ. ಈ ಹಿನ್ನಲೆಯಲ್ಲಿ ತಾಲ್ಲೂಕಿನ ಆಡನೂರು, ಬಿ.ದುರ್ಗ, ಚಿಕ್ಕಜಾಜೂರು, ಚಿತ್ರಹಳ್ಳಿ, ಗುಂಜಿಗನೂರು, ಹೆಚ್.ಡಿ.ಪುರ, ಮುತ್ತಿಗದೂರು, ಶಿವಗಂಗಾ, ಟಿ.ನುಲೇನೂರು, ತಾಳ್ಯ, ಟೇಕಲವಟ್ಟಿ, ಉಪ್ಪರಿಗೆನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳಲ್ಲಿ ಏಪ್ರಿಲ್ 11 ರಿಂದ 29 ವರೆಗೆ ಗ್ರಾಮ ಸಭೆಗಳನ್ನು ಆಯೋಜಿಸಲಾಗಿದೆ. ಸದರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳಲ್ಲಿನ ಅರ್ಹ ಫಲಾನುಭವಿಗಳು ಸಂಬಂಧ ಪಟ್ಟ ಗ್ರಾಪಂಗಳಲ್ಲಿ ವಿಚಾರಿಸಿ, ಗ್ರಾಮ ಸಭೆ ನಡೆಯುವ ದಿನಾಂಕದಂದು ಸಭೆಯಲ್ಲಿ ಭಾಗವಹಿಸಿ.

### 718 ಫಲಾನುಭವಿ ಆಯ್ಕೆ

» ಚಿತ್ರದುರ್ಗ

ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಚಿತ್ರದುರ್ಗ ನಗರ ವ್ಯಾಪ್ತಿಯಲ್ಲಿ 1001 ಜಿ+2 ಗುಂಪು ಮನೆಗಳನ್ನು ನಿರ್ಮಿಸಿ ಹಂಚಿಕೆ ಮಾಡಲು, 2019ರಲ್ಲಿ ನಿವೇಶನ ಹಾಗೂ ವಸತಿ ರಹಿತರಿಂದ ಅರ್ಜಿ ಆಹ್ವಾನಿಸಲಾಗಿತ್ತು. ನಗರಸಭೆಗೆ ಸ್ವೀಕೃತಗೊಂಡ ಅರ್ಜಿಗಳ ಪೈಕಿ 1,598 ನಿವೇಶನ ವಸತಿ ರಹಿತ ಅರ್ಹ ಫಲಾನುಭವಿಗಳನ್ನು ಗುರುತಿಸಿಗಿದ್ದು, ಮೊದಲನೆಯ ಹಂತದಲ್ಲಿ 718 ಫಲಾನುಭವಿಗಳು ಮನೆಯ ಘಟಕ ವೆಚ್ಚದ ಶೇ% 10 ರಷ್ಟು ಅಂದರೆ ರೂ.63,000 ಗಳನ್ನು ಜಿಲ್ಲಾಧಿಕಾರಿ ಹಾಗೂ ಪೌರಾಯುಕ್ತರ ಜಂಟಿ ಎಸ್ಕ್ರೂ ಖಾತೆಗೆ ಪಾವತಿ ಮಾಡಿದ್ದಾರೆ. ಮೊದಲು ಪಾವತಿಸಿದವರಿಗೆ ಮೊದಲ ಆದ್ಯತೆ ಮೇರೆಗೆ ಈ 718 ಫಲಾನುಭವಿಗಳನ್ನು ಆಯ್ಕೆ ಮಾಡಿದ್ದು, ಇವರು ಚಿತ್ರದುರ್ಗ ನಗರ ಅಥವಾ ರಾಜ್ಯದ ಯಾವುದೇ ಭಾಗದಲ್ಲಿ ನಿವೇಶನ ಅಥವಾ ಮನೆ ಹೊಂದಿರುವುದು ಕಂಡು ಬಂದಲ್ಲಿ, ಸಾರ್ವಜನಿಕರು ಏ.25ರ ಒಳಗೆ, ನಗರ ಸಭೆಯ ಆಶ್ರಯ ಹಾಗೂ ವಸತಿ ಶಾಖೆಯ ವಿಷಯ ನಿರ್ವಾಹಕರುಗಳಾದ ಕೆಂಚಪ್ಪ.ಎನ್ ಮತ್ತು ಭೀಷ್ಮ ಇವರಿಗೆ ಖುದ್ದು ಹಾಜರಾಗಿ ಆಕ್ಷೇಪಣೆಗಳನ್ನು ಸಲ್ಲಿಸಬಹುದು ಎಂದು ಪೌರಾಯುಕ್ತೆ ಎ.ರೇಣುಕಾ ತಿಳಿಸಿದ್ದಾರೆ.

# ಕೆರೆ ಮಣ್ಣು ರೈತರ ಜಮೀನಿಗೆ, 2 ದಿನದಲ್ಲಿ ಜಾಗ ಗುರುತಿಸಿ; ಒತ್ತುವರಿ ಕೆರೆಗಳ ತೆರವಿಗೆ ಕಟ್ಟುನಿಟ್ಟಿನ ಕ್ರಮಕ್ಕೆ ಸೂಚನೆ

» ದಾವಣಗೆರೆ



ಕೆರೆಯಲ್ಲಿನಮಣ್ಣನ್ನುರೈತರಜಮೀನುಗಳಿಗೆ ತೆಗೆದುಕೊಂಡು ಹೋಗಲು ಅವಕಾಶ ಕಲ್ಪಿಸಿ, ಮಣ್ಣು ತೆಗೆಯಲು ಸ್ಥಳವನ್ನು ಗುರುತು ಮಾಡಿಕೊಡುವ ಜವಾಬ್ದಾರಿ ಆಯಾ ಇಲಾಖೆ ಅಧಿಕಾರಿಗಳದ್ದಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದರು.

ಅವರು ಸೋಮವಾರ (ಏ.7) ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕೆರೆ ಒತ್ತುವರಿ ತೆರವು ಜಿಲ್ಲಾ ಮಟ್ಟದ ಟಾಸ್ಕ್ ಪೋರ್ಸ್ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಬೇಸಿಗೆ ಕಾಲದಲ್ಲಿ ಕೆರೆಯ ಮಣ್ಣನ್ನು ರೈತರ ಜಮೀನುಗಳಿಗೆ ನೀಡುವುದರಿಂದ ಹೂಳೆತ್ತಿದಂತಾಗುತ್ತದೆ. ಮತ್ತು ಮಳೆಗಾಲದಲ್ಲಿ ಕೆರೆಯಲ್ಲಿ ನೀರಿನ ಸಂಗ್ರಹ ಹೆಚ್ಚು ಮಾಡಲು ಅವಕಾಶ ಇದ್ದು ರೈತರ ತೋಟ, ಜಮೀನುಗಳಿಗೆ ಹೊಸ ಮಣ್ಣು ಹಾಕವುದರಿಂದ ಬೆಳೆಯು ಉತ್ತಮವಾಗಿ ಬಂದು ರೈತರಿಗೂ ಅನುಕೂಲ, ಅಂತರ್ಜಲ ಮಟ್ಟವೂ ಹೆಚ್ಚಳವಾಗಲಿರುವುದರಿಂದ ಸ್ವಯಂ ಪ್ರೇರಿತವಾಗಿ ರೈತರಿಗೆ ಅನುಕೂಲ ಮಾಡಿಕೊಡಬೇಕೆಂದು ತಿಳಿಸಿ ಸಣ್ಣ ನೀರಾವರಿ ಇಲಾಖೆ ಮತ್ತು ಜಲಸಂಪನ್ಮೂಲ ಇಲಾಖೆ, ಜಿಲ್ಲಾ ಪಂಚಾಯತ್ ಕೆರೆಗಳಲ್ಲಿ ಮುಂದಿನ ಎರಡು ದಿನಗಳಲ್ಲಿ ಜಾಗ ಗುರುತಿಸಿ ರೈತರಿಗೆ ಹೂಳೆತ್ತಲು ಅವಕಾಶ ಮಾಡುವ ಕೆಲಸ ಮಾಡಬೇಕೆಂದು ತಿಳಿಸಿದರು. ಕೆರೆ ಒತ್ತುವರಿ ತೆರವಿಗೆ ಕ್ರಮ; ಜಿಲ್ಲೆಯಲ್ಲಿ ಎಲ್ಲಾ ಇಲಾಖೆಗಳ ವ್ಯಾಪ್ತಿಯಲ್ಲಿ 538 ಕೆರೆಗಳಿದ್ದು ಇದರಲ್ಲಿ ಸಣ್ಣ ನೀರಾವರಿ ಇಲಾಖೆಯ 72 ಕೆರೆಗಳಿವೆ. ಮತ್ತು ಶಾಂತಿಸಾಗರ ಮತ್ತು ಇತರೆ ನೀರಿನ ಸಂಗ್ರಹವಾಗುವ 22 ಕೆರೆಗಳು ಜಲಸಂಪನ್ಮೂಲ ಇಲಾಖೆಗೆ ಬರಲಿದ್ದು ಉಳಿದಂತೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ಹಾಗೂ ಗ್ರಾಮ ಪಂಚಾಯಿತಿ, ಅರಣ್ಯ ಇಲಾಖೆ ವ್ಯಾಪ್ತಿಯ ಕೆರೆಗಳಾಗಿವೆ. ಈ ಕೆರೆಗಳ ಒತ್ತುವರಿಯನ್ನು ತೆರವು ಮಾಡಲೇಬೇಕು.

ಶಾಂತಿಸಾಗರ ಕೆರೆಯು 5447.10 ಎಕರೆಯಷ್ಟಿದ್ದು ಇದರಲ್ಲಿ 280 ಎಕರೆಯಷ್ಟು ಒತ್ತುವರಿಯಾಗಿದೆ. ಈ ಕೆರೆ 45 ಕಿ.ಮೀ ಸುತ್ತಳತೆಯನ್ನು ಹೊಂದಿರುತ್ತದೆ. ಈ ಕೆರೆಯ ಒತ್ತುವರಿಯನ್ನು ತೆರವು ಮಾಡಲು ತಹಶೀಲ್ದಾರರು ಹಾಗೂ ಜಲಸಂಪ್ಮೂಲ ಇಲಾಖೆಯವರು ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಯಲ್ಲಿ 72 ಕೆರೆಗಳಿಂದ 10807.27 ಎಕರೆ ವಿಸ್ತೀರ್ಣವಿದೆ. 39 ಕೆರೆಗಳ ಅಳತೆ ಮಾಡಿದ್ದು 33 ಕೆರೆಗಳು ಬಾಕಿ ಇವೆ. ಇದರಲ್ಲಿ 21 ಕೆರೆಗಳಿಂದ 262 ಎಕರೆ ಒತ್ತುವರಿಯಾಗಿದೆ ಎಂದು ಗುರುತಿಸಿ 20 ಕೆರೆಗಳ 254 ಎಕರೆ ಒತ್ತುವರಿ ತೆರವು ಮಾಡಲಾಗಿದೆ. ಒತ್ತುವರಿ ತೆರವಿಗೆ 1 ಕೆರೆ ಬಾಕಿ ಇದೆ. ಜಗಳೂರು ಕೆರೆ ಒತ್ತುವರಿಯನ್ನು ತೆರವು ಮಾಡುವ ಪ್ರಕರಣ ಹೈಕೋರ್ಟ್‌ನಲ್ಲಿದ್ದು ಪುನರ್ ಪರಿಶೀಲಿಸಲು ಆದೇಶವಾಗಿರುವುದರಿಂದ ಮತ್ತೆ ಪರಿಶೀಲಿಸಿ ನ್ಯಾಯಾಲಯಕ್ಕೆ ವರದಿ ಸಲ್ಲಿಸಲು ತಹಶೀಲ್ದಾರ್‌ಗೆ ಸೂಚನೆ ನೀಡಿದರು.

ಸಭೆಯಲ್ಲಿಕಾನೂನುಸೇವಾಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮ.ಕರಣ್ಣನವರ, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಉಪವಿಭಾಗಾಧಿಕಾರಿ ಸಂತೋಷ್ ಪಾಟೀಲ್, ಅಭಿಷೇಕ್, ರೈತ ಮುಖಂಡರಾದ ಬಲ್ಲೂರು ರವಿಕುಮಾರ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಅಂಬೇಡ್ಕರ್ ರಥಯಾತ್ರೆ ಅದ್ದೂರಿ ಸ್ವಾಗತಕ್ಕೆ ಸಿದ್ದತೆ



» ಹೊಳಲ್ಕೆರೆ

ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ರಥಯಾತ್ರೆ ಹೊಳಲ್ಕೆರೆ ವಿಧಾನಸಭಾ ಕ್ಷೇತ್ರ ಭರಮಸಾಗರಕ್ಕೆ ಶನಿವಾರ ಆಗಮಿಸಲಿದ್ದು, ಸಿರಿಗೆರೆ ಸರ್ಕಲ್‌ನಿಂದ ರಥಯಾತ್ರೆಯನ್ನು ಅದ್ದೂರಿಯಾಗಿ ಬರಮಾಡಿಕೊಳ್ಳಬೇಕಾಗಿರುವುದರಿಂದ ಕಾರ್ಯಕರ್ತರು ಹಾಗೂ ಮುಖಂಡರುಗಳು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸುವಂತೆ ಶಾಸಕ ಡಾ.ಎಂ. ಚಂದ್ರಪ್ಪ ಮನವಿ ಮಾಡಿದರು.ಭರಮಸಾಗರದ ಪ್ರವಾಸಿ ಮಂದಿರದಲ್ಲಿ ಸೋಮವಾರ ನಡೆದ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಮಾತನಾಡಿದ ಶಾಸಕ ಡಾ.ಎಂ.ಚಂದ್ರಪ್ಪ ಶುಕ್ರವಾರ ಸಂಜೆ ಚಿತ್ರದುರ್ಗಕ್ಕೆ ಬರುವ ಅಂಬೇಡ್ಕರ್ ರಥಯಾತ್ರೆ ಶನಿವಾರ ಬೆಳಿಗ್ಗೆ 10–30 ಕ್ಕೆ ಸಿರಿಗೆರೆ ಸರ್ಕಲ್‌ಗೆ ಆಗಮಿಸಲಿದೆ. ನೂರಾರು ಬೈಕ್‌ಗಳಲ್ಲಿ ಕಾರ್ಯಕರ್ತರು ಆಗಮಿಸಿ ಯಾತ್ರೆಯನ್ನು ಭವ್ಯವಾಗಿ ಬರಮಾಡಿಕೊಳ್ಳಬೇಕು. ನಂತರ ಭರಮಸಾಗರದಲ್ಲಿ ಅಂಬೇಡ್ಕರ್‌ರವರ ದೊಡ್ಡ ಕಟೌಟ್‌ಗೆ ಮಾಲಾರ್ಪಣೆ ಮಾಡಲಾಗುವುದು. ಎಲ್ಲಿಯೂ ಲೋಪವಾಗದಂತೆ ಎಲ್ಲರೂ ಒಟ್ಟಾಗಿ ಸೇರಿ ಅಂಬೇಡ್ಕರ್ ರಥಯಾತ್ರೆಯನ್ನು ಸ್ವಾಗತಿಸೋಣ. ಪ್ರತಿ ಪಂಚಾಯಿತಿಯಿಂದ ನಾಲ್ವರಿಗೆ ಜವಾಬ್ದಾರಿ ನೀಡಲಾಗಿದೆ. ಭರಮಸಾಗರದಿಂದ ಎಮ್ಮೆಹಟ್ಟಿವರೆಗೆ ರಥಯಾತ್ರೆಯನ್ನು ಕಳಿಸಿಕೊಡುವುದು ನಮ್ಮ ಹೊಣೆ. ಇದಕ್ಕೆ ಕಾರ್ಯಕರ್ತರು ಸಜ್ಜಾಗಬೇಕೆಂದು ತಿಳಿಸಿದರು.ಭರಮಸಾಗರ ಬಿಜೆಪಿ.ಮಂಡಲ ಅಧ್ಯಕ್ಷ ಶೈಲೇಶ್, ಮಂಜುನಾಥ, ಮಲ್ಲಣ್ಣ, ಬಸವರಾಜ್, ಎನ್.ಟಿ.ಬಸಣ್ಣ, ನಾರಾಯಣರಾವ್, ಸಿದ್ದಲಿಂಗಣ್ಣ ಹಾಗೂ ಪಕ್ಷದ ಹಿರಿಯ ಮುಖಂಡರುಗಳು, ಕಾರ್ಯಕರ್ತರು ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿದ್ದರು.

## ರಾಮನವಮಿ ಪ್ರಯುಕ್ತ ಆಂಜನೇಯಸ್ವಾಮಿಗೆ ವಿಶೇಷ ಪೂಜೆ



» ಚಿತ್ರದುರ್ಗ

ಮರ್ಯಾದಾ ಪುರುಷ ಶ್ರೀರಾಮ ನವಮಿ ಪ್ರಯುಕ್ತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆವರಣದಲ್ಲಿರುವ ಆಂಜನೇಯಸ್ವಾಮಿಗೆ ನವ ಕ್ರಾಂತಿ ರಕ್ಷಣಾ ವೇದಿಕೆ ವತಿಯಿಂದ ಭಾನುವಾರ ವಿಶೇಷವಾಗಿ ಅಲಂಕರಿಸಿ ಪೂಜಿಸಲಾಯಿತು. ಶ್ರೀರಾಮನ ಪರಮ ಭಕ್ತ ಆಂಜನೇಯನಿಗೆ ಬಗೆ ಬಗೆಯ ಹೂವು ಹಾಗೂ ಹಾರಗಳಿಂದ ಸಿಂಗರಿಸಿ ಪೂಜಿಸಿದ ನಂತರ ಸಾರ್ವಜನಿಕರಿಗೆ ಕೋಸುಂಬರಿ ಹಾಗೂ ತಣ್ಣನೆಯ ಪಾನಕ ವಿತರಿಸಲಾಯಿತು. ನವ ಕ್ರಾಂತಿ ರಕ್ಷಣಾ ವೇದಿಕೆ ರಾಜ್ಯ ಗೌರವಾಧ್ಯಕ್ಷ ಮಹಾಂತೇಶ್, ಅಧ್ಯಕ್ಷ ಆರ್.ಪ್ರದೀಪ್‌ಕುಮಾರ್, ಪ್ರಧಾನ ಕಾರ್ಯದರ್ಶಿ ವಿರೂಪಾಕ್ಷಪ್ಪ, ಉಪಾಧ್ಯಕ್ಷ ಹನುಮಂತರಾಯ ಮೋಹನ್, ವಿನಯ್ ಡಿ.ಸಿ. ಮಂಜುನಾಥ್, ವಿನಯ್‌ಕುಮಾರ್, ಸುನಿಲ್ ನಾಯಕ್, ನವೀನ್‌ಕುಮಾರ್, ಮಂಜುನಾಥ್, ಮಲ್ಲೇಗೌಡ್ರು, ಬಸವರಾಜ್, ಶ್ರೀಧರ್, ವರುಣ್ ಗುರುಮೂರ್ತಿ, ತಿಪ್ಪೇಸ್ವಾಮಿ ಇವರುಗಳು ಈ ಸಂದರ್ಭದಲ್ಲಿದ್ದರು.

## ಇಂದು ಮಧುವಣಗಿತ್ತಿ ಶಾಸ್ತ್ರ ನಡೆಯುವುದರ ಮೂಲಕ ದೇವಿಯ ಜಾತ್ರೆಗೆ ಚಾಲನೆ

» ಹೊಸದುರ್ಗ

ನಗರದ ಗ್ರಾಮ ದೇವತೆ ಮತ್ತು ಶಕ್ತಿ ದೇವತೆಯಾದ ಶ್ರೀ ದುರ್ಗಾಂಬಿಕಾ ದೇವಿಯವರ ರಥೋತ್ಸವವು ಎಪ್ರಿಲ್ 22 ರಂದು ಮಂಗಳವಾರ ಬೆಳಿಗ್ಗೆ 8.30 ಕ್ಕೆ ಜರುಗಲಿದ್ದು ಮರು ದಿನ ಎಪ್ರಿಲ್ 23 ರಂದು ಬುಧವಾರ ಮದ್ಯಾಹ್ನ 4 ಗಂಟೆಯಿಂದ ಸಿಡಿ ಉತ್ಸವ ಜರುಗಲಿದೆ ಎಂದು ಶ್ರೀ ದುರ್ಗಾಂಬಿಕಾ ದೇವಸ್ಥಾನ ಸಮಿತಿಯ ಅಧ್ಯಕ್ಷ ಅಗ್ರೋ ಹೆಚ್.ಶಿವಣ್ಣ ತಿಳಿಸಿದರು.

ಪಟ್ಟಣದ ಶ್ರೀ ದುರ್ಗಾಂಬಿಕಾ ದೇವಾಲಯದಲ್ಲಿ ಅಧ್ಯಕ್ಷರ ಮತ್ತು ಧರ್ಮದರ್ಶಿಗಳ ಸಮ್ಮುಖದಲ್ಲಿ ನಡೆದ ರಥೋತ್ಸವದ ಪೂರ್ವ ಬಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರತಿ ವರ್ಷದಂತೆ ಸಾಂಪ್ರದಾಯಕ ವಿಧಿ ವಿಧಾನಗಳ ಪ್ರಕಾರ ಈ ವರ್ಷವೂ ಕೂಡ ದೇವಿಯ ರಥೋತ್ಸವ ಮತ್ತು ಸಿಡಿ ಉತ್ಸವ ಜರುಗಲಿದ್ದು ಈ ಹಿನ್ನೆಲೆಯಲ್ಲಿ 2025 ನೇ ಸಾಲಿನ ರಥೋತ್ಸವದ ಪೂರ್ವ ಬಾವಿಯಾಗಿ ವಿದ್ಯುಕ್ತವಾಗಿ ಕಾರ್ಯಕ್ರಮದ ರೂಪ ರೇಷಗಳಿಗೆ ಚಾಲನೆ ಕೊಡಲಾಗಿದ್ದು ಎಪ್ರಿಲ್ 8 ರಂದು ಮಂಗಳವಾರ



ಮಧುವಣಗಿತ್ತಿ ಶಾಸ್ತ್ರ ನಡೆಯುವುದರ ಮೂಲಕ ದೇವಿಯ ಜಾತ್ರೆಗೆ ಚಾಲನೆ ದೋರಕಲಿದ್ದು ಎಪ್ರಿಲ್ 22 ರಂದು ನಡೆಯಲಿರುವ ರಥೋತ್ಸವವನ್ನ ನೋಡಿ ದೇವಿಯ ದರ್ಶನ ಮಾಡಲು ರಾಜ್ಯದ ವಿವಿಧ ಮೂಲೆಗಳಿಂದ ಅಪಾರ ಸಂಖ್ಯೆಯ ಭಕ್ತರು ಆಗಮಿಸಲಿದ್ದು ರಥೋತ್ಸವದ ದಿನ ಅನ್ನಸಂತರ್ಪಣೆ ಆಯೋಜಿಸಲಾಗಿದೆ, ಬಸ್ ಮಾಲಿಕರ ಸಂಘದಿಂದ ಉಚಿತ ಮಜ್ಜಿಗೆ ವಿತರಣೆ ಕಾರ್ಯಕ್ರಮ ಇದ್ದು ರಥೋತ್ಸವ ಮತ್ತು ಸಿಡಿ ಉತ್ಸವದಂದು ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಸೇರಲಿದ್ದು ಈ ಹಿನ್ನೆಲೆಯಲ್ಲಿ ದೇವಸ್ಥಾನ ಕಮಿಟಿಯಿಂದ ಸಾಕಷ್ಟು ಮುಂಜಾಗ್ರತಾ ಕ್ರಮಗಳನ್ನ ವಹಿಸಲಾಗುತ್ತಿದ್ದು ಪೋಲಿಸ್ ಬಂದೂಬಸ್ತ್ ವ್ಯವಸ್ಥೆ ಮಾಡುವಂತೆ ಪೋಲಿಸ್ ಇಲಾಖೆಗೆ ಮನವಿ ಮಾಡಲಾಗುವುದು ಎಂದರು.

ಈ ಸಂಧರ್ಬದಲ್ಲಿ ಮಲ್ಲಿಖಾರ್ಜುನ್, ಹೊಸಹಳ್ಳಿಕೃಷ್ಣಪ್ಪ, ಸತೀಶ್, ಮಂಜುನಾಥ್. ರಮೇಶ್, ಬ್ರಹ್ಮಪಾಲ್,ದೀಪಿಕಾಸತೀಶ್,ಸೇರಿದಂತೆ ಸಮಿತಿಯವರು ಗುಡಿಗೌಡರುಗಳು, ಧರ್ಮದರ್ಶಿಗಳು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ


# ಇಂದು ಹೊನ್ನೇನಹಳ್ಳಿ ಆಂಜನೇಯ ರಥೋತ್ಸವ

» ನಾಗತಿಹಳ್ಳಿಮಂಜುನಾಥ್

ಹೊಸದುರ್ಗ:ತಾಲೂಕಿನಹೊನ್ನೆನಹಳ್ಳಿಯ ಶ್ರೀ ಆಂಜನೇಯ ಸ್ವಾಮಿ ಎಂದರೆ ಅದು ಪವಾಡದ ದೇವರು ಎಂದೇ ಹೆಸರುವಾಸಿ ಅಂತಹ ಶ್ರೀ ಆಂಜನೇಯ ಸ್ವಾಮಿಯವರ ರಥೋತ್ಸವಕ್ಕೆ ಈಗ ಬರೋಬ್ಬರಿ 100 ವರ್ಷ, 100 ವರ್ಷ ತುಂಬಿರುವ ರಥೋತ್ವವವು ಶತಮಾನೋತ್ಸವದ ಸಂಬ್ರಮದಲ್ಲಿದೆ ಹೌದು ಇದೇ ಎಪ್ರಿಲ್ 8 ರಂದು ಮಂಗಳವಾರ ಬೆಳಿಗ್ಗೆ 8.30 ಕ್ಕೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ವೈಭವಯುತವಾಗಿ ಜರುಗಲಿದೆ. ಶತಮಾನೋತ್ಸವದ ರಥೋತ್ಸವಕ್ಕೆ ನಾಡಿದ ಮೂಲೆ ಮೂಲೆಗಳಿಂದ ಆಗಮಿಸಲಿರುವ ಭಕ್ತರು ಸಾಕ್ಷಿಯಾಗಲಿದ್ದಾರೆ.

ಶ್ರೀ ಆಂಜನೇಯ ಸ್ವಾಮಿಯವರ ಶತಮಾನದ ರಥೋತ್ಸವದ ಅಂಗವಾಗಿ ಈಗಾಗಲೆ ಧಾರ್ಮಿಕ ಕಾರ್ಯಕ್ರಮಗಳಿಗೆ ಚಾಲನೆ ದೊರಕಿದ್ದು ಎಪ್ರಿಲ್ 7 ರಂದು ಸೋಮವಾರ ಬೆಳಿಗ್ಗೆ 9 ಗಂಟೆಗೆ ಸೀತಾರಾಮ ಕಲ್ಯಾಣ,11 ಗಂಟೆಗೆ ಕಳಶ ಸ್ಥಾಪನೆ,ಸಂಜೆ 5 ಗಂಟೆಗೆ ಕಲ್ಯಾಣ ಮಂಟಪೋತ್ಸವ,7 ಗಂಟೆಗೆ ಧೂಳು ಉತ್ಸವ.

ಎಪ್ರಿಲ್ 8 ರಂದು ಮಂಗಳವಾರ ಬೆಳಿಗ್ಗೆ 8.30 ಕ್ಕೆ ಶ್ರೀ ಅಂಜನೇಯ ಸ್ವಮಿಯವರ ರಥೋತ್ಸವ,ನಂತರ 11.30 ಕ್ಕೆ 101 ಎಡೆ ಧೂಪದ ಸೇವೆ, ಎಪ್ರಿಲ್ 9 ರಂದು ಬುಧವಾರ ಬೆಳಿಗ್ಗೆ 6 ಗಂಟೆಗೆ ಪಾರ್ವಟಿ ಮಧ್ಯಹ್ನ 1 ಗಂಟೆಗೆ ಓಕಳಿ,ದೋಡ್ಡೆಡೆ ಸೇವೆ,101 ಎಡೆ ಸೇವೆ ಮತ್ತು ಪ್ರಸಾದ ವಿನಿಯೋಗ,ಸಂಜೆ ಶಯನೋತ್ಸವ,ಮಹಾಮಂಗಳಾರತಿ,ರಾತ್ರಿ ಅನ್ನಸಂರ್ತಣೆ ಕಾರ್ಯಕ್ರಮಗಳು ಜರುಗಲಿದ್ದು ವಿಶೇಷವಗಿ ಚಂದ್ರಮಂಡಲೆಽತ್ಸವ,ಅಶ್ವವಾಹನೋತ್ಸವ,ಗಜೋತ್ಸವ,ಕಾಳಿಂಗ ಮರ್ಥನೋತ್ಸವ,ಸರ್ಪ ಮಂಡಲೆಽತ್ಸವ,ಇಂದ್ರಜಿತೋತ್ಸವ,ಗರುಡೋತ್ಸವ, ಕಲ್ಯಾಣ ಮಂಟಪೋತ್ಸವ ಮತ್ತು ಧೂಳು ಉತ್ಸವ ಕಾರ್ಯಕ್ರಮಗಳು ಜರುಗಲಿವೆ.



ಭಕ್ತ ಸಂರಕ್ಷಕ, ಸಂಕಷ್ಟನಿವಾರಕ: ಯಾರು ಧರ್ಮವನ್ನು ಕಾಪಾಡುತ್ತಾರೋ ಅವರನ್ನು ಧರ್ಮಕಾಪಾಡುತ್ತದೆ ಎಂಬ ಜ್ಞಾನ ಸಂದೇಶದ ಸತ್ಯತೆಯನ್ನು ಅರಿಯಲು ತಾಲ್ಲೂಕಿನ ಹೊನ್ನೇನಹಳ್ಳಿ ಗ್ರಾಮದ ಪ್ರಸಿದ್ದ ಶ್ರೀ ಆಂಜನೇಯ ಸ್ವಾಮಿಯವರ ಸನ್ನಿಧಿಯೇ ಸಾಕ್ಷಿಯಾಗಿದೆ, ಶ್ರೀ ಆಂಜನೇಯಸ್ವಾಮಿ ಭಕ್ತ ಸಂರಕ್ಷಕ, ಸಂಕಷ್ಟನಿವಾರಕ ಭಕ್ತ ಸಂಪ್ರದಾಯದ ಬೇಡಿದ ವರ ನೀಡುವ ಕೃಪಾಮೂರ್ತಿ ಎಂಬಂತಹ ಹಲವಾರು ರೀತಿಯಲ್ಲಿ ಭಕ್ತರ ಭಾವನೆಗಳಿಗೆ ಭಾಜನರಾಗಿದ್ದಾರೆ.

ವ್ಯಾಸರಾಯರ ಕಾಲದಲ್ಲಿ ಪ್ರತಿಷ್ಠಾಪನೆಯಾಗಿವೆ:ಹೊನ್ನೆನಹಳ್ಳಿಗ್ರಾಮಕ್ಕೆಒಂದು ಬಹು ಪುರಾತನ ಕಾಲದಿಂದಲೂ ನೆಲೆಸಿರುವ ಶ್ರೀ ಆಂಜನೇಯ ಸ್ವಾಮಿ ದೇವರು ತುಂಬಾ ಮಹಿಮಾನ್ವಿತ ಮೂರ್ತಿಯಾಗಿದೆ, ಹೊನ್ನೇನಹಳ್ಳಿ,ತಾಳ್ಯ,ಕೆಲ್ಲೋಡು, ಶ್ರೀ ಆಂಜನೇಯಸ್ವಾಮಿ ದೇವರ ಮೂರ್ತಿಗಳು ಏಕಕಾಲದಲ್ಲಿ ವ್ಯಾಸರಾಯರ ಕಾಲದಲ್ಲಿ ಪ್ರತಿಷ್ಠಾಪನೆಯಾಗಿವೆ ಎಂದು ಪ್ರತೀತಿ ಇದೆ. ಹೊನ್ನೇನಹಳ್ಳಿ ಸ್ವಾಮಿಯು ಬಹುದೊಡ್ಡ ಪವಾಡ ಪುರುಷ ಸಂಜೆಯಿಂದ ರಾತ್ರಿವರೆಗೆ ಪೂಜಾಕಾರ್ಯಗಳು ಹರಕೆ ಭಕ್ತ ಸಮರ್ಪಣೆ ಯಥಾವತ್ತಾಗಿ ನಿರಂತರ ನಡೆಯುತ್ತಲೇ ಇರುತ್ತವೆ.

**ಎಪ್ರಿಲ್ 8 ರಂದು ಮಂಗಳವಾರ ಬೆಳಿಗ್ಗೆ 8.30 ಕ್ಕೆ ಶ್ರೀ ಅಂಜನೇಯ ಸ್ವಮಿಯವರ ರಥೋತ್ಸವ,ನಂತರ 11.30 ಕ್ಕೆ 101 ಎಡೆ ಧೂಪದ ಸೇವೆ, ಎಪ್ರಿಲ್ 9 ರಂದು ಬುಧವಾರ ಬೆಳಿಗ್ಗೆ 6 ಗಂಟೆಗೆ ಪಾರ್ವಟಿ ಮಧ್ಯಹ್ನ 1 ಗಂಟೆಗೆ ಓಕಳಿ,ದೋಡ್ಡೆಡೆ ಸೇವೆ,101 ಎಡೆ ಸೇವೆ ಮತ್ತು ಪ್ರಸಾದ ವಿನಿಯೋಗ,ಸಂಜೆ ಶಯನೋತ್ಸವ, ಮಹಾಮಂಗಳಾರತಿ,ರಾತ್ರಿ ಅನ್ನಸಂರ್ತಣೆ ಜರುಗಲಿದೆ.**

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T